# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 39 | THURSDAY 16-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಕಾಂಗ್ರೆಸ್ ಸರ್ಕಾರವೊಂದೇ ಕೊಟ್ಟ ಮಾತಿನಂತೆ ನಡೆಯುವ ಸರ್ಕಾರ; ಗ್ಯಾರಂಟಿ ಯೋಜನೆಗಳ ನಡುವೆಯೂ ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರಕ್ಕಿಂತ ಉತ್ತಮವಾಗಿದೆ

ಚಿಕ್ಕಮಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳನ್ನು ಬಲವಾಗಿ ಸಮರ್ಥಿಸಿಕೊಂಡಿದ್ದು, ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರ ಸರ್ಕಾರಕ್ಕಿಂತ ಉತ್ತಮವಾಗಿದೆ ಎಂದು ಹೇಳಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಮಾತನಾಡಿದರು.

ಗ್ಯಾರಂಟಿಗಳು ಕೂಡ ಅಭಿವೃದ್ಧಿಯ ಭಾಗವೇ. ಜನರ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸ್ಥಿತಿಯನ್ನು ಸುಧಾರಿಸುವುದೇ ನಿಜವಾದ ಅಭಿವೃದ್ಧಿ ಎಂದು ಅಭಿಪ್ರಾಯಪಟ್ಟರು.

ಜನಕಲ್ಯಾಣಕ್ಕೆ ಒತ್ತಾಸೆಯಾಗಿರುವ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳೂ ಒಂದು ವಿಧದ ಅಭಿವೃದ್ಧಿಯಾಗಿದ್ದು, ಗ್ಯಾರಂಟಿಗಳ ನಡುವೆಯೂ ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರಕ್ಕಿಂತ ಉತ್ತಮವಾಗಿದೆ ಎಂದು ಹೇಳಿದರು.

36 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗಿರುವ ಸೇತುವೆಯೂ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಇಂದು ಚಾಲನೆ ನೀಡಲಾಗಿದೆ. ವಿರೋಧ ಪಕ್ಷದವರು ಅಭಿವೃದ್ಧಿ ಕೆಲಸಗಳಿಗೆ ಹಣವಿಲ್ಲ,



ಗ್ಯಾರಂಟಿಗಳ ನಂತರ ಖಜಾನೆ ಖಾಲಿಯಾಗಿವೆ, ಅಭಿವೃದ್ಧಿ ಶೂನ್ಯ ಎಂದು ಟೀಕಿಸುತ್ತಾರೆ. ಆದರೆ ಗ್ಯಾರಂಟಿಗಳ ಜೊತೆಗೆ ಅಭಿವೃದ್ಧಿಯನ್ನೂ ನಮ್ಮ ಸರ್ಕಾರ ಸಾಧ್ಯವಾಗಿಸಿದೆ.

ಗ್ಯಾರಂಟಿಗಳೂ ಒಂದು ವಿಧದ ಅಭಿವೃದ್ಧಿಯಾಗಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗಲು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸ್ವಾತಂತ್ರ್ಯ ಅತ್ಯಗತ್ಯ ಎಂದಿದ್ದರು. ವಿರೋಧ ಪಕ್ಷದವರು ಅಂಬೇಡ್ಕರ್‌ರವರ ಈ ಚಿಂತನೆಯ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮೈಸೂರು ಮಹಾರಾಜರಾಗಿದ್ದ ನರಸಿಂಹರಾಜ ಒಡೆಯರ್ ಅವರ ಕಾಲದಲ್ಲಿ ಎಡಳ್ಳಿಯಾಗಿದ್ದ ಈ ಪ್ರದೇಶಕ್ಕೆ ನರಸಿಂಹರಾಜಪುರ ಎಂದು ನಾಮಕರಣವಾಯಿತು. ಈ ಭಾಗದ ಅಭಿವೃದ್ಧಿಯ ಉದ್ದೇಶದಿಂದ, ಇಲ್ಲಿನ ಶಾಸಕರ ಒತ್ತಾಸೆಯಿಂದ ಇಂದು ಸೇತುವೆ ನಿರ್ಮಾಣ ಸಾಧ್ಯವಾಗಿದೆ. ಉಳಿದಂತೆ ರಸ್ತೆ ಅಗಲೀಕರಣ, ಬ್ಯಾರೇಜ್ ಕಂ ಬ್ರಿಡ್ಜ್ ನಿರ್ಮಾಣ, ಪ್ರವಾಸೋದ್ಯಮವೂ ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಇದೇ ವೇಳೆ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರವು 2023–24ರ ಆಯವ್ಯಯದಲ್ಲಿ ರೂ.5,300 ಕೋಟಿಗಳನ್ನು ಘೋಷಿಸಿತು. ಆದರೆ, ಇದುವರೆಗೆ ಈ ಅನುದಾನ ನೀಡಿಲ್ಲ. ಈ ಮೂಲಕ ರಾಜ್ಯದ ಜನರಿಗೆ ಕೇಂದ್ರ ದ್ರೋಹವೆಸಗಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ಸರ್ಕಾರವೊಂದೇ ಕೊಟ್ಟ ಮಾತಿನಂತೆ ನಡೆಯುವ ಸರ್ಕಾರವಾಗಿದೆ. ನಮ್ಮ ಸರ್ಕಾರದಿಂದ ಗ್ಯಾರಂಟಿಗಳಿಗೆ ಇದುವರೆಗೆ 1.30 ಲಕ್ಷ ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ರಾಜ್ಯದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿಯವರು ಇತರೆ ರಾಜ್ಯಗಳಲ್ಲಿ ಅವುಗಳನ್ನೇ ಅನುಸರಿಸುತ್ತಿದ್ದಾರೆ. ಕೇಂದ್ರದ ಜಿಡಿಪಿ ದರ 7.14 ರಷ್ಟಿದ್ದರೆ, ರಾಜ್ಯದ ಜಿಡಿಪಿ 8.1 ರಷ್ಟಿದೆ. ದೇಶದಲ್ಲಿ 53.11 ಲಕ್ಷ ಕೋಟಿಗಳಿದ್ದ ಸಾಲದ ಮೊತ್ತ, ಪ್ರಸ್ತುತ ಪ್ರಧಾನಿ ಮೋದಿಯವರ ಅಧಿಕಾರಾವಧಿಯಲ್ಲಿ 218 ಲಕ್ಷ ಕೋಟಿ ರೂ.ಗೆ ತಲುಪಿದೆ. ರಾಜ್ಯದ ಆರ್ಥಿಕ ಬೆಳವಣಿಗೆ ಕೇಂದ್ರಕ್ಕಿಂತ ಗಣನೀಯವಾಗಿ ಹೆಚ್ಚಿದೆ. ಕರ್ನಾಟಕದ ಆರ್ಥಿಕ ಸ್ಥಿತಿಯು ಸದೃಢವಾಗಿದ್ದು, ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳಿಗೆ ಪೂರಕವಾಗಿದೆ.

ಬಿಜೆಪಿಯ ರಾಜ್ಯಾಧ್ಯಕ್ಷ ವಿಜಯೇಂದ್ರರವರು ರಾಜ್ಯದ ಆರ್ಥಿಕತೆ ವಸ್ತುಸ್ಥಿತಿಯ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಟೀಕಿಸಿದ್ದಾರೆ. ಅವರು ಬಜೆಟ್‌ನ ಅಂಶಗಳ ಬಗ್ಗೆ ಮನನ ಮಾಡಿಕೊಳ್ಳದೇ, ಕೇವಲ ಪ್ರಚಾರಕ್ಕಾಗಿ ಹೇಳಿಕೆ ನೀಡುತ್ತಿದ್ದಾರೆ. ನಮ್ಮ ಸರ್ಕಾರ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ, ನುಡಿದಂತೆ ನಡೆದಿದೆ. ಜನರ ದಾರಿತಪ್ಪಿಸುವ ಬಿಜೆಪಿಯನ್ನು ನಂಬಬಾರದು ಎಂದು ಹೇಳಿದರು.

## ಆದಿಚುಂಚನಗಿರಿಯಲ್ಲಿ ಶ್ರೀ ಭೈರವೈಕ್ಯ ಮಂದಿರ ಲೋಕಾರ್ಪಣೆಗೊಳಿಸಿದ ಪ್ರಧಾನಿ ಮೋದಿ



ಮಂಡ್ಯ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಮಠಕ್ಕೆ ಇಂದು ಭೇಟಿ ನೀಡಿ ಶ್ರೀ ಗುರು ಭೈರವೈಕ್ಯ ಮಂದಿರವನ್ನು ಲೋಕಾರ್ಪಣೆಗೊಳಿಸಿದ್ದಾರೆ. ಬಾಲಗಂಗಾಧರನಾಥ ಸ್ವಾಮಿಗಳ ಗದ್ದುಗೆಯ ಸ್ಥಳದಲ್ಲಿ ನಿರ್ಮಿಸಲಾಗಿರುವ ಈ ಭವ್ಯ ದೇಗುಲವನ್ನು ಪ್ರಧಾನಿಗಳು ಉದ್ಘಾಟಿಸಿ, ಸ್ವಾಮಿಗಳ ಮೂರ್ತಿಗೆ ಪೂಜೆ ಸಲ್ಲಿಸಿದರು.

ಉದ್ಘಾಟನೆಯ ವೇಳೆ ಪ್ರಧಾನಿ ಮೋದಿ ಅವರ ಜೊತೆಗೆ ಆದಿಚುಂಚನಗಿರಿ ಮಠದ ಪೀಠಾಧಿಪತಿ ನಿರ್ಮಲಾನಂದನಾಥ ಸ್ವಾಮೀಜಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವರಾದ ಕುಮಾರಸ್ವಾಮಿ ಮತ್ತು ಶೋಭಾ ಕರಂದ್ಲಾಜೆ ಅವರು ಉಪಸ್ಥಿತರಿದ್ದರು.

**ಏನಿದರ ವಿಶೇಷತೆ?:** ದ್ರಾವಿಡ, ಚಾಲುಕ್ಯ, ಹೊಯ್ಸಳ ಮತ್ತು ಗಂಗರ ಶೈಲಿಯ ವಿನ್ಯಾಸಗಳನ್ನು ಒಳಗೊಂಡಿರುವ ಈ ಮಂದಿರವು ಒಡಿಶಾದ ಸೂರ್ಯ ದೇವಾಲಯದ ನಿರ್ಮಾಣದಿಂದ ಪ್ರೇರಣೆ ಪಡೆದಿದೆ. ಸುಮಾರು ಹತ್ತು ವರ್ಷಗಳ ನಿರಂತರ ಪರಿಶ್ರಮದಿಂದ ಸುಮಾರು 80 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಈ ಮಂದಿರವು ವಾಸ್ತುಶಿಲ್ಪಿ ಶಂಕರ್ ಸ್ಥಪತಿ ಅವರ ಮೇಲ್ವಿಚಾರಣೆಯಲ್ಲಿ ತಲೆಯೆತ್ತಿ ನಿಂತಿದೆ.

ಆದಿಚುಂಚನಗಿರಿ ಮಠದ 71ನೇ ಪೀಠಾಧ್ಯಕ್ಷರಾಗಿದ್ದ ಪರಮಪೂಜ್ಯ ಜಗದ್ಗುರು ಪದ್ಮಭೂಷಣ ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮಿಯವರ ಸಮಾಧಿ ಸ್ಥಳವಾಗಿದೆ (ಲಿಂಗೈಕ್ಯರಾದ ಸ್ಥಳ). ಶ್ರೀಗಳು ಜನವರಿ 13, 2013ರಂದು ಲಿಂಗೈಕ್ಯರಾದರು. ಅವರ ದಿವ್ಯ ಸ್ಮರಣೆ ಹಾಗೂ ಭಕ್ತರ ದರ್ಶನಕ್ಕಾಗಿ ಅತ್ಯಂತ ಶ್ರದ್ಧೆಯಿಂದ ಈ ಭವ್ಯ ಮಂದಿರವನ್ನು ನಿರ್ಮಿಸಲಾಗಿದೆ.

## ಆರ್.ಎಸ್.ಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಬಗ್ಗೆ ಹಗುರವಾಗಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳಿ



**ಬೆಳಗಾವಿ ವಾರ್ತೆ ಗೋಕಾಕ:** ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿಯು ಕೋಟ್ಯಾಂತರ ಕಾರ್ಯಕರ್ತರನ್ನು ಹೊಂದಿದ್ದು ದೇಶದ ತುರ್ತು ಸಂದರ್ಭಗಳಲ್ಲಿ ರಾಷ್ಟ್ರ ಸೇವೆಗಾಗಿ ಅನೇಕ ಸಂಘ ಪರಿವಾರದ ಸೇವಕರು ತಮ್ಮ ಅಮೂಲ್ಯ ಜೀವನವನ್ನು ದೇಶಕ್ಕಾಗಿ ಮುಡಿಪಾಗಿಟ್ಟಿದ್ದಾರೆ.

ಆರ್.ಎಸ್.ಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಬಗ್ಗೆ ಹಗುರವಾಗಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಗೋಕಾಕ ಸಿಪಿಐ ಸುರೇಶಬಾಬು.ಆರ್.ಬಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಇತ್ತೀಚೆಗೆ ಆಸ್ಸಾಂ ಚುನಾವಣೆಯ ಪ್ರಚಾರ ಸಭೆಯಲ್ಲಿ ರಾಷ್ಟ್ರ ಭಕ್ತರಾದ ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿ ಕಾರ್ಯಕರ್ತರನ್ನು ವಿಷಸರ್ಪಕ್ಕೆ ಹೋಲಿಸಿದ್ದಲ್ಲದೇ, ಕುರಾನ್‌ದಲ್ಲಿ ಬರೆದಿದೆ ನಮಾಜ್ ಮಾಡುವ ಸಂದರ್ಭದಲ್ಲಿ ವಿಷಸರ್ಪ ಕಂಡರೆ ಅದನ್ನು ಕೊಲ್ಲಬೇಕು, ಅದೇ ರೀತಿ ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿ ಕಾರ್ಯಕರ್ತರನ್ನು ವಿಷಸರ್ಪವಿದ್ದಂತೆ ಅವರನ್ನು ಕೊಲ್ಲಬೇಕು ಎಂದು ಪ್ರಚೋದನಕಾರಿ ಭಾಷಣ ಮಾಡಿದ್ದಕ್ಕೆ ಬಿಜೆಪಿ ಯುವ ಮೋರ್ಚಾ ನಗರ ಮಂಡಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಯುವ ಮೋರ್ಚಾ ನಗರ ಅಧ್ಯಕ್ಷ ಈರಣ್ಣ ಅಂಬಲಿ, ರಾಜೇಶ್ವರಿ ವಡೇಯರ, ಪ್ರಭು ರಾವಳೋಜಿ, ಕೆ.ಎಸ್.ಸುಭಂಜಿ, ಮೋಹನ ವಾಳವೇಕರ, ದರ್ಶನ ಗುಡ್ಡಾಕಾರ, ಗೋಪಾಲ ಗೋಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಾಂಗ್ರೆಸ್‌ನಿಂದ ಅಬ್ದುಲ್ ಜಬ್ಬಾರ್ ಅಮಾನತು

ಬೆಂಗಳೂರು: ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯ ವಿರುದ್ಧ ಕೆಲಸ ಮಾಡಿದ್ದ ವಿಧಾನ ಪರಿಷತ್ ಸದಸ್ಯರಾದ ಅಬ್ದುಲ್ ಜಬ್ಬಾರ್ ಅವರನ್ನು ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ತಕ್ಷಣದಿಂದಲೇ ಅನ್ವಯವಾಗುವಂತೆ ಅಮಾನತು ಮಾಡಲಾಗಿದೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಅಬ್ದುಲ್ ಜಬ್ಬಾರ್, ನಜೀರ್ ಅಹ್ಮದ್, ಸಚಿವ ಜಮೀರ್ ಅಹ್ಮದ್ ಖಾನ್ ಅವರು ಪಕ್ಷ ವಿರೋಧಿ ಕೆಲಸ ಮಾಡಿದ್ದಾರೆ ಎಂದು ಕಾಂಗ್ರೆಸ್ ಹೈಕಮಾಂಡ್ ಗೆ ದೂರು ನೀಡಲಾಗಿತ್ತು. ಈ ದೂರನ್ನು ಗಂಭೀರವಾಗಿ ಪರಿಗಣಿಸಿದ ಹೈಕಮಾಂಡ್ ಅಬ್ದುಲ್ ಜಬ್ಬಾರ್ ಅವರಿಗೆ ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸೂಚಿಸಿತ್ತು. ಅದರಂತೆ ಅಬ್ದುಲ್ ಜಬ್ಬಾರ್ ರಾಜೀನಾಮೆ ಸಲ್ಲಿಸಿದ್ದರು.

ಈಗ ಅಬ್ದುಲ್ ಜಬ್ಬಾರ್ ಅವರನ್ನು ಕಾಂಗ್ರೆಸ್‌ನ ಪ್ರಾಥಮಿಕ ಸದಸ್ಯತ್ವದಿಂದಲೇ ಅಮಾನತು ಮಾಡಿ, ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ.ಕೆ. ಶಿವಕುಮಾರ್ ಆದೇಶ ಹೊರಡಿಸಿದ್ದಾರೆ.

ಈ ನಿರ್ಧಾರವೂ ಪಕ್ಷದ ಶಿಸ್ತಿನ ಪಾಲನೆ ಮತ್ತು ಸಂಘಟನಾ ಬಲವನ್ನು ಕಾಪಾಡುವ ಉದ್ದೇಶದಿಂದ ಕೈಗೊಳ್ಳಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಚುನಾವಣೆಯಲ್ಲಿ ಪಕ್ಷ ವಿರೋಧಿಯಾಗಿ ನಡೆದುಕೊಂಡಿದ್ದ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿದ್ದ ನಜೀರ್ ಅಹ್ಮದ್ ಅವರನ್ನು ನಿನ್ನೆಯಷ್ಟೇ ಹುದ್ದೆಯಿಂದ ವಜಾಗೊಳಿಸಲಾಗಿತ್ತು.

## ಡಾ. ಅಂಬೇಡ್ಕರ್ ಅವರು ಸಮಾಜದಲ್ಲಿ ಸಮಾನತೆ & ನ್ಯಾಯ ಸ್ಥಾಪನೆಗಾಗಿ ತಮ್ಮ ಜೀವನವನ್ನೇ ಅರ್ಪಿಸಿದ ಮಹಾನ್ ನಾಯಕರು

**ಬೆಳಗಾವಿ ವಾರ್ತೆ ಮೂಡಲಗಿ:** ಡಾ. ಅಂಬೇಡ್ಕರ್ ಅವರು ಸಮಾಜದಲ್ಲಿ ಸಮಾನತೆ ಮತ್ತು ನ್ಯಾಯ ಸ್ಥಾಪನೆಗಾಗಿ ತಮ್ಮ ಜೀವನವನ್ನೇ ಅರ್ಪಿಸಿದ ಮಹಾನ್ ನಾಯಕರು. "ಶಿಕ್ಷಣ ಪಡೆಯಿರಿ, ಸಂಘಟಿತರಾಗಿ, ಹೋರಾಡಿ" ಎಂಬ ಅವರ ಅಮೂಲ್ಯ ಸಂದೇಶ ಇಂದಿಗೂ ಪ್ರತಿ ನಾಗರಿಕನಿಗೆ ದಾರಿದೀಪವಾಗಿದೆ ಎಂದು ನಾಗನೂರ ಅರ್ಥವ ಪ.ಪೂ ಕಾಲೇಜಿನ ನಿರ್ದೇಶಕ ಹಾಗೂ ಉಪನ್ಯಾಸಕ ಚೇತನ ಜೋಗನ್ನವರ ಹೇಳಿದರು.

ಪಟ್ಟಣದ ಶ್ರೀ ಶ್ರೀಪಾದಬೋಧ ಸ್ವಾಮಿ ಪ್ರಥಮ ದರ್ಜೆ ಮಹಾ ವಿದ್ಯಾಲಯದ ಸಭಾ ಭವನದಲ್ಲಿ ಮೂಡಲಗಿ ತಾಲೂಕಾ ಆಡಳಿ, ತಾಲೂಕಾ ಪಂಚಾಯತ, ಪುರಸಭೆ ಮೂಡಲಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಗೋಕಾಕ ಸಂಯುಕ್ತ ಆಶ್ರದಲ್ಲಿ ಮಂಗಳವಾರ ಹಮ್ಮಿಕೊಂಡಿದ ಭಾರತ ರತ್ನ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ ಅವರ 135ನೇ ಜನ್ಮ ದಿನಾಚರಣೆಯಲ್ಲಿ ಅತಿಥಿ ಉಪನ್ಯಾಸ ನೀಡುತ್ತಾ ಮಾತನಾಡಿದ ಅವರು, ಅಂಬೇಡ್ಕರ್ ಅವರು ಶಿಕ್ಷಣವನ್ನೇ ಮುಕ್ತಿಯ ಸಾಧನವೆಂದು ಪರಿಗಣಿಸಿ ಹಿಂದುಳಿದ ವರ್ಗಗಳ ಉತ್ತರಣೆಗೆ ಶಿಕ್ಷಣವೇ ಮುಖ್ಯವೆಂದು ಒತ್ತಿ ಹೇಳಿದರು. ಆದ್ದರಿಂದ, ಈ ದಿನಾಚರಣೆಯ ಮೂಲಕ ವಿದ್ಯಾರ್ಥಿಗಳಲ್ಲಿ ಜ್ಞಾನಾಸಕ್ತಿ ಮತ್ತು ಸಮಾನತೆಯ ಅರಿವು ಬೆಳೆಸುವುದು ಅತ್ಯಂತ ಅಗತ್ಯವಾಗಿದೆ ಎಂದರು.

ಸಮಾಜದ ಶಕ್ತಿ ಒಗ್ಗಟ್ಟಿನಲ್ಲಿ ಇದೆ ಎಂಬುದನ್ನು ಅಂಬೇಡ್ಕರ್ ಅವರು ಸಾರಿದರು. ವಿಭಜನೆಯ ಬದಲು ಏಕತೆಯನ್ನು ಬೆಳೆಸಿ, ಎಲ್ಲ ವರ್ಗಗಳ ಜನರು ಒಂದಾಗಿ ಕೆಲಸ ಮಾಡುವ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕಾಗಿದೆ. ಅನ್ಯಾಯ, ಅಸಮಾನತೆ ಮತ್ತು ಶೋಷಣೆ ವಿರುದ್ಧ ಹೋರಾಡುವುದು ಪ್ರತಿಯೊಬ್ಬರ ಕರ್ತವ್ಯವೆಂದು ಅವರು ತಿಳಿಸಿದರು. ಹೋರಾಟವು ಶಾಂತಿಯುತವಾಗಿಯೂ, ಸಂವಿಧಾನ ಬದ್ಧವಾಗಿಯೂ ಇರಬೇಕು ಎಂಬುದು ಅವರ ಸ್ಪಷ್ಟ ಸಂದೇಶವಾಗಿತು, ಈ ಹಿನ್ನಲೆಯಲ್ಲಿ, ಎಲ್ಲಾ ಶಿಕ್ಷಣ ಸಂಸ್ಥೆಗಳು, ಸಂಘಟನೆಗಳು ಮತ್ತು ಸಾರ್ವಜನಿಕರು ಜಾತಿ ಭೇದವನ್ನು ತೊರೆದು, ಒಗ್ಗಟ್ಟಿನಿಂದ "ಅಂಬೇಡ್ಕರ್ ಜ್ಞಾನ ದಿನಾಚರಣೆ"ಯನ್ನು ಆಚರಿಸಿ, ಸಮಾಜದಲ್ಲಿ ಸೌಹಾರ್ದತೆ, ನ್ಯಾಯ ಮತ್ತು ಸಮಾನತೆಯನ್ನು ಬೆಳೆಸುವಂತೆ ಆಗಬೇಕು, ಸಮಾನತೆ□ನಮ್ಮ ಧ್ಯೇಯ, ಶಿಕ್ಷಣ□ನಮ್ಮ ಶಕ್ತಿ, ಸಂಘಟನೆ ಮತ್ತು ಹೋರಾಟ□ನಮ್ಮ ಮಾರ್ಗ

ಅಂಬೇಡ್ಕರ್ ತತ್ವಗಳು ನಮ್ಮಗೆ ಪ್ರೇರಣೆಯಾಗಿವೆ ಎಂದ ಅವರು ಸರ್ವ ಜನಾಂಗ ಒಂದಾಗಿ ಸೇರಿ ಮಹಾನ್ ಚಿಂತಕ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಜ್ಞಾನ, ಸಮಾನತೆ ಮತ್ತು ಮಾನವೀಯತೆಯ ಸಂದೇಶವನ್ನು ಸಾರುವ "ಅಂಬೇಡ್ಕರ್ ಜ್ಞಾನ ದಿನಾಚರಣೆ"ಯನ್ನು ಸರ್ವಜನೋತ್ಸವವಾಗಿ ಆಚರಿಸ ಬೇಕೆಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ ಶ್ರೀಶೈಲ್ ಗುಡಮೆ ಮಾತನಾಡಿ, ಮಹಾನ್ ತತ್ವಜ್ಞಾನಿ ಚಿಂತಕ ಡಾ.ಬಿ.ಆರ್.ಅಂಬೇಡ್ಕರ ಅವರ ತತ್ವ ಸಿದ್ದಾಂತಗಳನ್ನು ಪ್ರತಿಯೊಬ್ಬರು ತಮ್ಮ



ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಸಮಾರಂಭದ ವೇದಿಕೆಯಲ್ಲಿ ತಾ.ಪಂ ಇಓ ಪ್ರಸನ್ನ ನೇರ್ಲೆಕರ, ಬಿಇಓ ಪ್ರಕಾಶ ಹಿರೇಮಠ, ಸಿಡಿಪಿಓ ಯಲ್ಲಪ್ಪ ಗದಾಡಿ, ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ, ಹೆಸ್ಕಾಂ ಅಧಿಕಾರಿ ಎಂ.ಎಸ್.ನಾಗನ್ನವರ, ಸಿಪಿಐ ಶ್ರೀಶೈಲ್ ಬ್ಯಾಕೂಡ, ಪ್ರಥಮ ದರ್ಜೆ ಮಹಾವಿದ್ಯಾಲಯದ ಪ್ರಾಚಾರ್ಯ ಮಹೇಶ ಕುಂಬಾರ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಮಯದಲ್ಲಿ ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ದ್ವಿತೀಯ ಪರಿಕ್ಷೇಯಲ್ಲಿ ಸಾಧನೆ ಗೈದ ತಾಲೂಕಿ ಐವರು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಮತ್ತು ಅತ್ಯುನತ ಶ್ರೇಣಿಯಲ್ಲಿ ತೇರ್ಗಡೆಯಾದ ವಸತಿ ನಿಲಯದ ಪಿಯುಸಿ ವಿದ್ಯಾರ್ಥಿಗಳನ್ನು ಸನ್ಮಾನಿದರು.

ಗೋಕಾಕ ಸಮಾಜ ಕಲ್ಯಾಣ ಇಲಾಖೆ ಕಛೇರಿ ವ್ಯವಸ್ಥಾಪಕ ಎಮ್.ಎಸ್. ಪಾಟೀಲ ಸ್ವಾಗತಿಸಿದರು, ಮೂಡಲಗಿ ವಸತಿ ನಿಲಯಪಾಲಕ ಯಲ್ಲಪ್ಪ ಭಜಂತ್ರಿ ನಿರೂಪಿಸಿದರು, ವಡೇರಹಟ್ಟಿ ವಸತಿ ನಿಲಯ ಪಾಲಕ ಅರುಣ ನುಚ್ಚುಂಡಿ ವಂದಿಸಿದರು. ಸಮಾರಂಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ವಸತಿ ನಿಲಯಗಳ ನಿಲಯಪಾಲಕರು, ದಲಿತ ಸಂಘಟನೆ ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

ಇದಕ್ಕೂ ಮುಂಚೆ ಪಟ್ಟಣದ ಸರ್ಕಾರಿ ಹಾಗೂ ಗಾಣಿಗೇರ್ ಮತ್ತು ಗಿರಡ್ಡಿ ಆಸ್ಪತ್ರೆಗಳಲ್ಲಿರುವ ಒಳರೋಗಿಗಳಿಗೆ ಹಣ್ಣು ಹಂಪಲ ವಿತರಣೆ ಮಾಡಿ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರ ಮೆರವಣಿಗೆಯು ಆರಂಭವಾಗಿ ಕಲ್ಮೇಶ್ವರ ವೃತ್ತ, ಚನ್ನಮ್ಮ ವೃತ್ತ, ಕರೇಮ್ಮಾದೇವಿ ವೃತ್ತ, ಬಸವೇಶ್ವರ ವೃತ್ತ, ಸಂಗಪ್ಪಣ್ಣ ವೃತ್ತ ರಸ್ತೆ ಮುಖಾಂತರ ಶಾಲೆಯವರಿಗೆ ಜರುಗಿತು.

## ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ತತ್ವ ಮತ್ತು ಸಂದೇಶಗಳು ಒಂದು ವರ್ಗ, ಸಮುದಾಯಕ್ಕೆ ಸೀಮಿತವಾಗದೆ ಇಡಿ ಮಾನವ ಕುಲಕ್ಕೆ ದಾರಿದೀಪವಾಗಿವೆ



**ಬೆಳಗಾವಿ ವಾರ್ತೆ ಗೋಕಾಕ:** ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ತತ್ವ ಮತ್ತು ಸಂದೇಶಗಳು ಒಂದು ವರ್ಗ, ಸಮುದಾಯಕ್ಕೆ ಸೀಮಿತವಾಗದೆ ಇಡಿ ಮಾನವ ಕುಲಕ್ಕೆ ದಾರಿದೀಪವಾಗಿವೆ ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಸೋಮವಾರದಂದು ನಗರದ ಅವರ ಗೃಹ ಕಛೇರಿಯಲ್ಲಿ ಹಮ್ಮಿಕೊಂಡ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವದಲ್ಲೇ ಶ್ರೇಷ್ಠ ಸಂವಿಧಾನವನ್ನು ರಚಿಸಿ ಹೊರ ರಾಷ್ಟ್ರಗಳಿಗೆ ನಮ್ಮ ಸಂವಿಧಾನ ಮಾದರಿಯಾಗುವಂತೆ ಮಾಡಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆ, ಆದರ್ಶ ನಡೆ ನಿತ್ಯ ಬದುಕಿನಲ್ಲಿ ಎಲ್ಲರೂ ಆಚರಣೆಗೆ ತರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಳ ಅಧ್ಯಕ್ಷ ಭೀಮಶಿ ಭರಮನ್ನವರ, ಮಾಜಿ ಜಿಪಂ ಸದಸ್ಯ ಟಿ ಆರ್ ಕಾಗಲ, ಶಾಸಕ ಆಪ್ತ ಸಹಾಯಕ ಲಕ್ಷ್ಮೀಕಾಂತ ಎತ್ತಿನಮನಿ, ಮಹಿಳಾ ಮೋರ್ಚಾ ಅಧ್ಯಕ್ಷೆ ರಾಜೇಶ್ವರಿ ಒಡೆಯರ, ಪ್ರಮೋದ ಜೋಶಿ, ಹರೀಶ್ ಬೂದಿಹಾಳ, ಲಕ್ಕಪ್ಪ ತಹಶೀಲ್ದಾರ್, ಲಕ್ಷ್ಮಣ ತಳ್ಳಿ, ಬಸವರಾಜ ಹಿರೇಮಠ, ಮಂಜುನಾಥ್ ಮಾವರಕರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧ: ಶಾಸಕ ಲಕ್ಷ್ಮಣ ಸವದಿ

**ಬೆಳಗಾವಿ ವಾರ್ತೆ ಅಥಣಿ:** "ಕ್ಷೇತ್ರದ ಗ್ರಾಮೀಣ ಭಾಗದ ಜನರಿಗೆ ಮೂಲಸೌಕರ್ಯ ಕಲ್ಪಿಸುವುದು ನನ್ನ ಮೊದಲ ಆದ್ಯತೆಯಾಗಿದ್ದು, ತಾಲೂಕಿನ ಅಭಿವೃದ್ಧಿಗಾಗಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದ್ದು," ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ತಾಲೂಕಿನ ಸಪ್ತಸಾಗರ, ತೀರ್ಥ ಹಾಗೂ ಖವಟಕೊಪ್ಪ ಗ್ರಾಮಗಳಲ್ಲಿ ಸುಮಾರು 14 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಗ್ರಾಮಸ್ಥರ ದೀರ್ಘಕಾಲದ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಈ ಕಾಮಗಾರಿಗಳು ಸಹಕಾರಿಯಾಗಲಿವೆ ಎಂದು ಅವರು ಆಶಯ ವ್ಯಕ್ತಪಡಿಸಿದರು.

ಇದೇ ವೇಳೆ 30 ಜನ ಶಾಸಕರು ದೆಹಲಿಗೆ ತೆರಳಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಸವದಿ ಅವರು, "ಶಾಸಕರು ದೆಹಲಿಗೆ ಹೋಗಿರುವ ವಿಚಾರ ನನ್ನ ಗಮನದಲ್ಲಿದೆ. ಸರ್ಕಾರ ರಚನೆಯಾದ ಸಂದರ್ಭದಲ್ಲಿ ಹೈಕಮಾಂಡ್, ಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರು ಎರಡುವರೆ ವರ್ಷಗಳ ನಂತರ ಸಚಿವ ಸಂಪುಟ ಪುನರ್ ರಚನೆ ಮಾಡಿ ಬೇರೆಯವರಿಗೆ ಅವಕಾಶ ನೀಡುತ್ತೇವೆ ಎಂಬ ಭರವಸೆ ನೀಡಿದ್ದರು. ಈಗ ಆ ಕಾಲಮಿತಿ ಮುಗಿದಿದೆ," ಎಂದ ಅವರು "ಸಚಿವ ಸ್ಥಾನ ಕೇಳುವುದು ತಪ್ಪಲ್ಲ ಎಂದು ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳೆ ಹೇಳಿದ್ದಾರೆ. ಆದ್ದರಿಂದ ಶಾಸಕರು ತಮ್ಮ ಭಾವನೆಗಳನ್ನು ಹೈಕಮಾಂಡ್ ಮುಂದೆ ವ್ಯಕ್ತಪಡಿಸಲು ಸಿಎಂ ಮತ್ತು ಡಿಸಿಎಂ ಅವರ ಒಪ್ಪಿಗೆ ಪಡೆದೇ ದೆಹಲಿಗೆ ತೆರಳಿದ್ದಾರೆ. ಸಚಿವ ಸಂಪುಟ ಪುನರ್ ರಚನೆಯಾಗಿ ಹೊಸಬರಿಗೆ ಅವಕಾಶ ಸಿಗಬೇಕು ಎಂಬುದು ಶಾಸಕರ ಆಶಯವಾಗಿದೆ," ಎಂದು ಸ್ಪಷ್ಟಪಡಿಸಿದರು.



ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ಶಿವರುದ್ರ ಗುಳ್ಳಪ್ಪನವರ, ಅಕ್ಬರ ನಾಲತವಾಡ ಮುಖಂಡರಾದ ಸಂಜಯ ನಾಡಗೌಡರ, ಚಂದು ಸಂಕ್ರಟ್ಟಿ,ಡಿ ಬಿ ನದಾಫ, ಅಶೋಕ ಐಗಳಿ, ಅಪ್ಪಾಸಾಬ ಕಾಂಬಳೆ,ಮಹೇಂದ್ರ ಸುಲಾರೆ, ಯಲ್ಲಪ್ಪ ಕಾಂಬಳೆ,ಸುಬಾಸ ಕಾಂಬಳೆ,ಕಾಸಪ್ಪ ಕಾಂಬಳೆ ರಾಮು ಗಸ್ತಿ,ರಾಮೇಶ ಕಾಂಬಳೆ, ರಾಮು ಪುಜೇರಿ, ರಾಜು ಪಾಟೀಲ, ವಿಜಯ ಕಾಂಬಳೆ, ಅಶೋಕ್ ನಾಯಿಕ, ಮಹಾದೇವ ಚೌಗಲಾ,ಚಂದ್ರಕಾಂತ್ ಕಾಮಗೌಡ, ಕಾಮಣ್ಣ ಸನದಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಶಿಕ್ಷಣವೇ ಸ್ವಾತಂತ್ರ್ಯದ ಕೀಲಿಗೈ



**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ಬದುಕಿನ ಹಾದಿಯಲ್ಲಿ ಎಷ್ಟೇ ಕಷ್ಟಗಳು ಎದುರಾದರೂ ಶಿಕ್ಷಣದ ಮೇಲಿನ ಆಸಕ್ತಿ ಮತ್ತು ನಿರಂತರ ಪರಿಶ್ರಮವಿದ್ದರೆ ಯಶಸ್ಸು ಸಿಗಲಿದೆ. ಇದಕ್ಕೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನವೇ ನಮಗೆ ಬಹುದೊಡ್ಡ ಸ್ಫೂರ್ತಿ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಅಭಿಪ್ರಾಯಪಟ್ಟರು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯುತ್ಸವ ಹಾಗೂ ಬಾಬು ಜಗಜೀವನ ರಾಂ ಅವರ 119ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರ ಜೀವನ ಬಾಲ್ಯದ ಕಷ್ಟಗಳನ್ನು ಸ್ಮರಿಸಿದ ಜಿಲ್ಲಾಧಿಕಾರಿಗಳು ಅಂಬೇಡ್ಕರ್ ನೀಡಿದ ಸಂವಿಧಾನದಿಂದಾಗಿ ಇಂದು ದೇಶದ ಪ್ರತಿಯೊಬ್ಬ ಪ್ರಜೆಯೂ ಘನತೆಯಿಂದ ಬದುಕಲು ಸಾಧ್ಯವಾಗಿದೆ. ಬಾಬು ಜಗಜೀವನ ರಾಮ್ ಅವರು ದೇಶದ ಉಪಪ್ರಧಾನಿಯಾಗಿ ಹಾಗೂ ಕೃಷಿ ಸಚಿವರಾಗಿ ಮಾಡಿದ ಸುಧಾರಣೆಗಳು ಭಾರತದ ಆಹಾರ ಭದ್ರತೆಗೆ ಭದ್ರ ಬುನಾದಿಯಾಗಿವೆ. ಶಾಲೆಗಳಲ್ಲಿ ಅಸಮಾನತೆ ಮತ್ತು ಅನೇಕ ಅಡೆತಡೆಗಳನ್ನು ಎದುರಿಸಿದರೂ ಅಂಬೇಡ್ಕರ್ ಶಿಕ್ಷಣವನ್ನು ಎಂದಿಗೂ ಕೈಬಿಡಲಿಲ್ಲ. ಅವರ ಪ್ರಕಾರ ಶಿಕ್ಷಣವೇ ಸ್ವಾತಂತ್ರ್ಯದ ಕೀಲಿ ಕೈ. ಈ ಮಂತ್ರವು ಇಂದಿನ ಪ್ರತಿಯೊಬ್ಬ ವಿದ್ಯಾರ್ಥಿಗೂ ದಾರಿದೀಪವಾಗಬೇಕು ಎಂದು ಕರೆ ನೀಡಿದರು. ಅದರಲ್ಲೂ ವಿಶೇಷವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಯುವಕರಿಗೆ ಅಂಬೇಡ್ಕರ್ ಅವರ ಸಾಧನೆ ಅತಿದೊಡ್ಡ ಪ್ರೇರಣೆಯಾಗಿದೆ.

"ನಮ್ಮ ಹಿನ್ನೆಲೆ ನಮ್ಮ ಭವಿಷ್ಯವನ್ನು ನಿರ್ಧರಿಸುವುದಿಲ್ಲ, ಬದಲಿಗೆ ನಾವು ಪಡೆಯುವ ಶಿಕ್ಷಣ ನಮ್ಮನ್ನು ರೂಪಿಸುತ್ತದೆ. ಜ್ಞಾನದಿಂದ ಮಾತ್ರ ಸ್ವಾಭಿಮಾನ ಮತ್ತು ಗೌರವ ಲಭಿಸಲು ಸಾಧ್ಯ ಎಂದು ತಿಳಿಸಿದರು.

ಇಂದಿನ ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗದೆ, ಅಂಬೇಡ್ಕರ್ ಅವರು ಹಾಕಿಕೊಟ್ಟ ಸಮಾನತೆ ಮತ್ತು ಸಮಾಜ ಸೇವೆಯ ಮಾರ್ಗದಲ್ಲಿ ನಡೆಯುವುದೇ ಅವರಿಗೆ ನಾವು ಸಲ್ಲಿಸುವ ನಿಜವಾದ ಗೌರವ. ಈ ನಿಟ್ಟಿನಲ್ಲಿ ಅವರ ಜೀವನದ ಆದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಕೀಲ ಸುಧೀರ್ ಕುಮಾರ್ ಮುರಳ್ಳಿ ಮಾತನಾಡಿ, ಭಾರತದ ಶೋಷಿತ ವರ್ಗಗಳಿಗೆ ಶಿಕ್ಷಣ, ಅಧಿಕಾರ ಮತ್ತು ಸಮಾನತೆಯ ಹಕ್ಕನ್ನು ತಂದುಕೊಡುವಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಬಾಬು ಜಗಜೀವನ್ ರಾಮ್ ಅವರ ಪಾತ್ರ ಅನನ್ಯವಾದುದು. ಬಾಬಾಸಾಹೇಬ್ ಅಂಬೇಡ್ಕರ್ ಅವರು ಪಶ್ಚಿಮ ಭಾರತದಲ್ಲಿ ಅಸ್ಪೃಶ್ಯತೆಯ ವಿರುದ್ಧ ಹೋರಾಡಿದರೆ, ಬಾಬು ಜಗಜೀವನ್ ರಾಮ್ ಅವರು ಪೂರ್ವ ಭಾರತದಲ್ಲಿ ಅದೇ ರೀತಿಯ ಸಾಮಾಜಿಕ ಅಡೆತಡೆಗಳನ್ನು ಮೆಟ್ಟಿ ನಿಂತರು.

ಬಾಲ್ಯದಲ್ಲಿ ಕುಡಿಯುವ ನೀರಿಗಾಗಿ ಅಸಮಾನತೆಯನ್ನು ಎದುರಿಸಿದ ಜಗಜೀವನ್ ರಾಮ್ ಅವರು, ತಾವು ಅಧಿಕಾರಕ್ಕೆ ಬಂದಾಗ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಮಾನ ಅವಕಾಶ ಸಿಗುವಂತೆ ಶ್ರಮಿಸಿದರು. ಅಂಬೇಡ್ಕರ್ ರಚಿಸಿದ ಸಂವಿಧಾನದ ಫಲವಾಗಿ ಇಂದು ದ್ರೌಪದಿ ಮುರ್ಮು ಅವರಂತಹ ಮಹಿಳೆ ದೇಶದ ರಾಷ್ಟ್ರಪತಿಯಾಗಲು ಸಾಧ್ಯವಾಗಿದೆ. ಚಹಾ ಮಾರುವ ವ್ಯಕ್ತಿ ದೇಶದ ಪ್ರಧಾನಿಯಾಗಲು ಮತ್ತು ಕುರಿ ಕಾಯುವ ವ್ಯಕ್ತಿ ರಾಜ್ಯದ ಮುಖ್ಯಮಂತ್ರಿಯಾಗಲು, ಅಂಬೇಡ್ಕರ್ ಮತ್ತು ಜಗಜೀವನ್ ರಾಮ್ ಅವರು ಹಾಕಿಕೊಟ್ಟ ಪ್ರಜಾಪ್ರಭುತ್ವದ ಅಡಿಪಾಯವೇ ಕಾರಣ. ಅದಷ್ಟೇ ಅಲ್ಲದೇ ಇಂದು ನಮ್ಮ ಮಕ್ಕಳು ಶಿಕ್ಷಣ, ಕ್ರೀಡೆ ಮತ್ತು ಕಲೆಗಳಲ್ಲಿ ಸಾಧನೆ ಮಾಡಿದರೆ ಸಮಾಜವು ಅವರಿಗೆ ಗೌರವ ನೀಡುತ್ತಿದೆ ಎಂದರೆ ಅದಕ್ಕೆ ಸಂವಿಧಾನವೇ ಸಾಕ್ಷಿ. ಅಂಬೇಡ್ಕರ್ ಸಂವಿಧಾನ ಶಿಲ್ಪಿ ಮಾತ್ರವಲ್ಲ, ಭಾರತದ ಭವಿಷ್ಯವನ್ನು ಕಟ್ಟಿದ ಮಹಾನ್ ನಾಯಕ ಎಂದ ಅವರು, ಒಬ್ಬ ಸಾಮಾನ್ಯ ರೈತ ಕುಟುಂಬದ ಹೆಣ್ಣುಮಗಳು ನ್ಯಾಯಾಧೀಶೆ ಅಥವಾ ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಂವಿಧಾನ ನೀಡಿದ ಸಮಾನ ಅವಕಾಶಗಳೇ ಕಾರಣ. ಸಂವಿಧಾನದ ಆಶಯಗಳನ್ನು ಕೇವಲ ಓದುವುದಲ್ಲ, ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶಿಕ್ಷಣ ಮತ್ತು ಸಬಲೀಕರಣದ ಮೂಲಕ ಅಂಬೇಡ್ಕರ್ ಅವರ ಕನಸು ನನಸು ಮಾಡಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಯಲ್ಲಪ್ಪ ಬಂಡಾರಿಕರ್ ಸಂವಿಧಾನ ಪೀಠಿಕೆ ಬೋಧಿಸಿದರು,

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ.ಎ.ಕಾಳೆ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಸಿ ಇ ಓ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ, ಹೂಡಾ ಅಧ್ಯಕ್ಷ ಹೆಚ್.ಎನ್.ಎಫ್ ಇಮಾಮ್ ನಿಯಾಜಿ, ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮನೋಹರ್,

ಅಂಬೇಡ್ಕರ್ ಸಂಘದ ಜಿಲ್ಲಾಧ್ಯಕ್ಷ ಕೆ ಪಿ ಉಮಾಪತಿ , ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಂಘ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

# ಡಾ.ಬಿ.ಆರ್.ಅಂಬೇಡ್ಕರ್ ಅವರ 135 ನೇ ಜಯಂತಿ ಕಾರ್ಯಕ್ರಮ

## ಡಾ.ಅಂಬೇಡ್ಕರ್ ಅವರು ಶ್ರೇಷ್ಠವಾದ ಸಂವಿಧಾನ ರಚನೆ ಮೂಲಕ ದೇಶದ ಸಮಾನತೆ ಮತ್ತು ನ್ಯಾಯ ವ್ಯವಸ್ಥೆಗೆ ಬಲವಾದ ಅಡಿಪಾಯ ಹಾಕಿಕೊಟ್ಟಿದ್ದಾರೆ: ಸಚಿವ ಸಂತೋಷ ಎಸ್.ಲಾಡ್




**ಬೆಳಗಾವಿ ವಾರ್ತೆ ಧಾರವಾಡ:** ಡಾ. ಬಿ. ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನೆ ಮೂಲಕ ದೇಶದ ಸಮಾನತೆ ಮತ್ತು ನ್ಯಾಯ ವ್ಯವಸ್ಥೆಗೆ ಬಲವಾದ ಅಡಿಪಾಯ ಹಾಕಿಕೊಟ್ಟವರು ಹಾಗೂ ಅವರು ಎದುರಿಸಿದ ಕಷ್ಟಗಳು ಅಪಾರವಾಗಿದ್ದು, ಸಮಾಜದ ಅನ್ಯಾಯ ಮತ್ತು ಅಸಮಾನತೆ ನಡುವೆಯೇ ಅವರು ಉನ್ನತ ಶಿಕ್ಷಣ ಪಡೆದು, ಹಲವು ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ ಭಾರತದ ಸಂವಿಧಾನವನ್ನು ರಚಿಸಿದ್ದಾರೆ ಎಂದು ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಹೇಳಿದರು.

ಅವರು ಇಂದು ಮಧ್ಯಾಹ್ನ ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ.ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಸಂಯುಕ್ತವಾಗಿ ಆಯೋಜಿಸಿದ್ದ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ ಅವರ 135 ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಸಂವಿಧಾನವನ್ನು ರಚಿಸಲು ಸುಮಾರು 2 ವರ್ಷ 11 ತಿಂಗಳು 18 ದಿನಗಳ ಕಾಲ ನಿರಂತರ ಚರ್ಚೆ ನಡೆಸಿ ಈ ಮಹತ್ವದ ಗ್ರಂಥವನ್ನು ರೂಪಿಸಲಾಗಿದೆ. ಭಾರತದಲ್ಲಿ ಹಿಂದಿನಿಂದಲೂ ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆ ಇದ್ದ ಸಂದರ್ಭದಲ್ಲಿ, ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ಅಂಬೇಡ್ಕರ್ ಅವರು ಹೋರಾಡಿ, ಎಲ್ಲ ವರ್ಗಗಳಿಗೂ ಸಮಾನ ಹಕ್ಕುಗಳನ್ನು ಒದಗಿಸುವ ವ್ಯವಸ್ಥೆಯನ್ನು ನಿರ್ಮಿಸಿದರು. ಸಂವಿಧಾನವು ಕೇವಲ ಒಂದು ವರ್ಗಕ್ಕೆ ಸೀಮಿತವಲ್ಲದೆ, ಎಲ್ಲಾ ನಾಗರಿಕರ ಹಿತಕ್ಕಾಗಿ ರೂಪಿತವಾಗಿದೆ ಎಂದು ಅವರು ಹೇಳಿದರು.

ಮೀಸಲಾತಿ ವ್ಯವಸ್ಥೆಯು ಸಾಮಾಜಿಕ ನ್ಯಾಯ ಸಾಧಿಸಲು ಅಗತ್ಯವಾಗಿದ್ದು, ಇದು ಭಾರತದಲ್ಲಷ್ಟೇ ಅಲ್ಲದೆ ಅನೇಕ ದೇಶಗಳಲ್ಲಿ ವಿವಿಧ ರೂಪಗಳಲ್ಲಿ ಜಾರಿಯಲ್ಲಿದೆ. ಸಮಾಜದಲ್ಲಿ ಹಿಂದುಳಿದ ವರ್ಗಗಳಿಗೆ ಅವಕಾಶ ಕಲ್ಪಿಸುವುದು ಇದರ ಮುಖ್ಯ ಉದ್ದೇಶ ಎಂದು ಅವರು ಹೇಳಿದರು.

ಹೆಣ್ಣುಮಕ್ಕಳ ಹಕ್ಕುಗಳ ವಿಷಯದಲ್ಲಿ ಅಂಬೇಡ್ಕರ್ ಅವರ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರಿಗೆ ಆಸ್ತಿ ಹಕ್ಕು, ಮರು ವಿವಾಹ ಹಕ್ಕು ಹಾಗೂ ಸಮಾನ ಅವಕಾಶಗಳನ್ನು ನೀಡುವಲ್ಲಿ ಅವರ ಪಾತ್ರವನ್ನು ಸ್ಮರಿಸಬೇಕಾಗಿದೆ ಎಂದು ಸವಮಚಿವ ಸಂತೋಷ ಲಾಡ್ ಅವರು ತಿಳಿಸಿದರು.

ಇಂದಿನ ಯುವಕರು ಅಂಬೇಡ್ಕರ್ ಅವರ ವಿಚಾರಗಳನ್ನು ಸರಿಯಾಗಿ ಅರಿತುಕೊಂಡು, ಸಂವಿಧಾನದ ಮೌಲ್ಯಗಳನ್ನು ಸಮಾಜದಲ್ಲಿ ಪ್ರಚಾರ ಮಾಡುವ ಜವಾಬ್ದಾರಿ ಹೊತ್ತುಕೊಳ್ಳಬೇಕು. ಸಮಾನತೆ, ನ್ಯಾಯ ಮತ್ತು ಸಹಬಾಳ್ವೆಯ ಆಶಯಗಳನ್ನು ಅಳವಡಿಸಿಕೊಂಡಾಗ ಮಾತ್ರ ದೇಶದಲ್ಲಿ ಸಾಮರಸ್ಯ, ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ನಮ್ಮಲ್ಲಿ ಸ್ವಾತಂತ್ರ್ಯ ಪೂರ್ವದಲ್ಲಿ 3000 ವರ್ಷ ಹಿಂದಗಡೆ ನೋಡಿಕೊಂಡು ಬಂದಾಗ ನಾವು ವರ್ಣಗಳಲ್ಲಿ ಬದುಕುತ್ತಾ ಇದ್ವಿ, ಆ ನಾಲ್ಕು ವರ್ಣಗಳಲ್ಲಿ ಅಸ್ಪೃಶ್ಯತೆಯ ಜನಗಳು ಇರಲಿಲ್ಲಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಸುಮಾರು ಇಂತಹ ಶೋಷಿತ ವರ್ಗಗಳ, ದಮನೀತ ವರ್ಗಗಳ ಹಕ್ಕಿಗಾಗಿ ಈ ದೇಶದ ವ್ಯವಸ್ಥೆಗಾಗಿ ಸಂವಿಧಾನ ಬರೆದಿದ್ದಾರೆ ಎಂದು ಅವರು ಹೇಳಿದರು.

ದೇಶದ ಸಂವಿಧಾನ ಪೂರ್ವದಲ್ಲಿ ಹೆಣ್ಣುಮಕ್ಕಳಿಗೆ ಪಿತ್ರಾರ್ಜಿತ ಆಸ್ತಿ ಆಗಲಿ, ಗಂಡನ ಆಸ್ತಿ ಆಗಲಿ, ಹಕ್ಕು ಇರಲಿಲ್ಲ. ಭಾರತ ದೇಶದಲ್ಲಿ ಇರತಕ್ಕಂತಹ ಪ್ರತಿಯೊಬ್ಬ ಹೆಣ್ಣುಮಕ್ಕಳಿಗೆ ಇವತ್ತು ಗಂಡನ ಆಸ್ತಿ ಅಥವಾಪಿತ್ರಾರ್ಜಿತ ಆಸ್ತಿಯಲ್ಲಿ ಹಕ್ಕು ಸಿಗಬೇಕಾಗಿದ್ರೆ, ಬೇರೆ ಯಾರು ಮಾಡಿಲ್ಲ, ಮಾಡಿದ್ದರೆ ಅದು ಬಾಬಾಸಾಹೇಬ್ ಅಂಬೇಡ್ಕರ್ ಮಾಡಿದ್ದಾರೆ ಎಂಬುವುದನ್ನು ಯಾರು ಮರೆಯಬಾರದು. ಇವತ್ತು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ವಿಚಾರ, ಈ ದೇಶದಲ್ಲಿ ಸಂವಿಧಾನ ಉಳಿಬೇಕಾಗಿದ್ರೆ ನಾವೆಲ್ಲರೂ ಇದನ್ನ ಅರ್ಥ ಮಾಡ್ಕೋಬೇಕು. ಇದನ್ನ ಉಳಿಸಬೇಕು. ಅದಕ್ಕೆ ನೀವು ಜಾಗೃತರಾಗಬೇಕು. ಸಮಾಜದಲ್ಲಿ ಬದಲಾವಣೆ ತರಬೇಕು. ಅಂಬೇಡ್ಕರ್ ವಾದಗಳು, ವಿಚಾರಗಳು, ಉಳಿಬೇಕು. ಅದನ್ನ ಪಾಲಿಸಬೇಕು. ಗಟ್ಟಿಯಾಗಿ ಬೆಳೆಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಹೇಳಿದರು.

ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಾಸ್ತಾವಿಕವಾಗಿ ಮಾತನಾಡಿದ, ಸಮಾಜದಲ್ಲಿ ಸಮಾನತೆ ಮತ್ತು ನ್ಯಾಯ ಸ್ಥಾಪನೆಗೆ ಯುವ ಸಮೂಹ ಹಕ್ಕುಗಳ ಜೊತೆಗೆ ಜವಾಬ್ದಾರಿಗಳನ್ನೂ ಅರಿತುಕೊಳ್ಳಬೇಕೆಂದು ಮತ್ತು ಯುವಕರು ತಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡುವುದಷ್ಟೇ ಸಾಕಾಗುವುದಿಲ್ಲ, ಆ ಹಕ್ಕುಗಳೊಂದಿಗೆ ಬಂದಿರುವ ಜವಾಬ್ದಾರಿಗಳನ್ನು ಸಹ ತಿಳಿದುಕೊಳ್ಳಬೇಕು ಎಂದು ಅವರು ಹೇಳಿದರು.

ಪ್ರಜಾಸತ್ತಾತ್ಮಕ ವ್ಯವಸ್ಥೆ ಕೇವಲ ಚುನಾವಣೆಗಳಿಗೆ ಸೀಮಿತವಾಗಿಲ್ಲ, ಅದು ಸಮಾಜದ ಪ್ರತಿಯೊಂದು ಸಂಸ್ಥೆಯಲ್ಲಿಯೂ, ವೈವಿಧ್ಯತೆಯು ಗೌರವದಲ್ಲಿಯೂ ಪ್ರತಿಫಲಿಸಬೇಕು. ಹಾಗೂ ಶಿಕ್ಷಣವೇ ಅತ್ಯಂತ ದೊಡ್ಡ ಶಕ್ತಿಯಾಗಿದ್ದು, ವಿದ್ಯಾರ್ಥಿಗಳು ಅಡೆತಡೆಗಳನ್ನು ದಾಟಿ ಸಾಧನೆ ಮಾಡುವುದರಿಂದ ಅಂಬೇಡ್ಕರ್ ಅವರ ಕನಸು ಸಾಕಾರಗೊಳ್ಳುತ್ತದೆ ಎಂದು ಅವರು ತಿಳಿಸಿದರು

ನ್ಯಾಯಾಂಗ, ಶಿಕ್ಷಣ, ಉದ್ಯೋಗ, ಅಡಳಿತ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ನಾಯಕತ್ವವನ್ನು ವಹಿಸುವತ್ತ ಯುವಕರು ಮುಂದಾಗಬೇಕು.

ಸಂವಿಧಾನದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಹಾಗೂ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವುದು ಕೇವಲ ಕಾರ್ಯಕ್ರಮಗಳಿಗೆ ಸೀಮಿತವಾಗದೇ, ನಮ್ಮ ನಡವಳಿಕೆ, ನಿರ್ಧಾರಗಳು ಮತ್ತು ಧೈರ್ಯದಲ್ಲಿ ಅವರ ಮೌಲ್ಯಗಳನ್ನು ಅನುಸರಿಸುವುದರ ಮೂಲಕ ಇರಬೇಕು ಎಂದು ಅವರು ಹೇಳಿದರು.

ಬಡವರು, ಶ್ರೀಮಂತರು, ಮಹಿಳೆಯರು ಹಾಗೂ ಎಲ್ಲಾ ವರ್ಗಗಳ ಜನರು ಸಮಾನ ಹಕ್ಕುಗಳೊಂದಿಗೆ ಬದುಕುವ ಸಮಾನತೆಯ ಸಮಾಜ ನಿರ್ಮಾಣವೇ ಅಂಬೇಡ್ಕರ್ ಅವರ ಕನಸು. ಅದನ್ನು ಸಾಕಾರಗೊಳಿಸಲು ಎಲ್ಲರೂ ಸಂವಿಧಾನದ ಆಶಯಗಳನ್ನು ಪಾಲಿಸಬೇಕು ಎಂದು ಅವರು ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಮುಂದೆ ಬರ್ತಾ ಇರುವಂತಹ ನಮ್ಮ ಪೀಳಿಗೆಗಳಿಗೆಲ್ಲ ಒಂದು ದಾರಿ ದೀವಿಗೆ ಆಗಿದ್ದಾರೆ. ಅವರ ಒಂದು ಜೀವನವನ್ನು ನೋಡಿದ್ರೆ, ನಾವು ಅಲ್ಲಿ ತುಂಬಾ ಸುಖವನ್ನು ನೋಡಲ್ಲ. ಅವರು ಜೀವನದಲ್ಲಿ ಸಾಕಷ್ಟು ಕಷ್ಟಗಳನ್ನ ಎದುರಿಸಿ ಜೀವನದ ಒಂದು ಹಂತಕ್ಕೆ ಬಂದಂತವರು. ಅವರು ಸಾಕಷ್ಟು ತಾರತಮ್ಯ, ಅಮಾನವೀಯತೆ ಅನುಭವಿಸಿದ್ರು, ಸಾಕಷ್ಟು ಅಡೆತಡೆಗಳನ್ನ ಅವರು ಎದುರಿಸಿದರು. ಆದರೆ ತಾವು ಅನುಭವಿಸಿದ ನೋವುಗಳನ್ನು ಪಕ್ಕಕ್ಕೆ ಸರಿಸಿ, ಯಾವುದಕ್ಕೂ ಕೋಪ ಮಾಡಿಕೊಳ್ಳದೆ, ಯಾವಾಗ್ಲೂ ಹೇಳುವಾಗ, "ಎಜುಕೇಶನ್ ಇಸ್ ದ ಗ್ರೇಟೆಸ್ಟ್ ವೆಪನ್" ಅಂತ ತಿಳಿಸಿದ್ದಾರೆ.

ನಮ್ಮ ಶಿಕ್ಷಣ ಏನಿದೆ, ಅದು ಎಲ್ಲಕ್ಕಿಂತ ಮುಖ್ಯವಾಗಿರುವಂತಹ ಅಸ್ತ್ರ ಅನ್ನೋದನ್ನ ಅವರು ಹೇಳಿದ್ದಾರೆ. ನಮ್ಮಲ್ಲಿ ಅರಿವು ಇರಬೇಕು, ನಮ್ಮಲ್ಲಿ ಆಲೋಚನೆ ಮಾಡುವಂತಹ ಶಕ್ತಿ ಇರಬೇಕು, ಮತ್ತೆ ಧೈರ್ಯ ಇರಬೇಕು ಅನ್ನುವಂತದ್ದು ಅವರು ತಮ್ಮ ಎಲ್ಲಾ ಕಾರ್ಯಗಳಿಂದ ತಿಳಿಸಿಕೊಟ್ಟಿದ್ದಾರೆ.

ಡಾ. ಅಂಬೇಡ್ಕರ್ ಅವರು ಏನು ಹೇಳಿದ್ದಾರೆ, ಅದು ಬರೀ ಒಂದು ಸಮುದಾಯಕ್ಕಲ್ಲ, ಅದು ಇಡೀ ಸಮಾಜಕ್ಕೆ ಹೇಳಿದ್ದಾರೆ. "ಜಸ್ಟಿಸ್ ಇಸ್ ನಾಟ್ ಎ ಪ್ರಿವಿಲೆಜ್, ಬಟ್ ಎ ಗ್ಯಾರಂಟಿ" ಅಂತ ಡಾ. ಅಂಬೇಡ್ಕರ್ ಅವರು ಹೇಳಿದ್ದಾರೆ.

ಸಂವಿಧಾನದ ಮಹತ್ವವನ್ನು ಶಾಲೆ, ಕಾಲೇಜು ಮತ್ತು ಮನೆಮನೆಗಳಲ್ಲಿ ಬೋಧಿಸುವುದು ಅಗತ್ಯ. ಇದರ ಅರಿವು ಮೂಡಿದಾಗ ಮಾತ್ರ ನಾಗರಿಕರು ಜವಾಬ್ದಾರಿಯುತ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಹುಬ್ಬಳ್ಳಿ ಜೆ.ಜಿ.ಪದವಿ ಪೂರ್ವ ಕಾಲೇಜಿನ ಉಪನ್ಯಾಸಕಿ ಮಲ್ಲಮ್ಮ ಯಾಟಗಲ್ ಅವರು ಡಾ.ಬಿ.ಆರ್. ಅಂಬೇಡ್ಕರ್ ಅವರ ಜೀವನ ಚರಿತ್ರೆ ಕುರಿತು ಪ್ರಧಾನ ಉಪನ್ಯಾಸ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ ಹೆಬ್ಬಳ್ಳಿ ಸ್ವಾಗತಿಸಿದರು. ಎಡಿಸಿ ಗೀತಾ ಸಿ.ಡಿ ಅವರು ಸಂವಿಧಾನದ ಪೂರ್ವ ಪೀಠಿಕೆಯನ್ನು ಬೋಧಿಸಿದರು. ಪ್ರವೀಣ ಮಸಕಿ ಅವರು ಕಾರ್ಯಕ್ರಮ ನಿರೂಪಿಸಿದರು. ಎಂ.ಬಿ. ಸನ್ನೇರಿ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಬೌದ್ಧ ಬಿಕ್ಕುಗಳಿಂದ ಬೌದ್ಧ ನಮನ ಮತ್ತು ಪ್ರಾರ್ಥನೆ ಜರುಗಿತು.

ವೇದಿಕೆಯಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಅಡಿವೇಶ ಗಿರೆಪ್ಪಾ ಇಟಗಿ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ ಸನದಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಮಹಾನಗರ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ, ಮಾಜಿ ಸಂಸದ ಪ್ರೊ.ಐ.ಜಿ.ಸನದಿ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಗುಂಜನ ಆರ್ಯ, ಎಸಿ ಶಾಲಂ ಹುಸೇನ್, ತಹಸಿಲ್ದಾರ ಡಾ.ಡಿ.ಎಚ್.ಹೂಗಾರ, ತಾ.ಪಂ.ಇಓ ಗಂಗಾಧರ ಕಂದಕೂರ ಸೇರಿದಂತೆ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು, ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿ ಸದಸ್ಯರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮುಖಂಡರು, ಹಿಂದುಳಿದ ವರ್ಗಗಳ ಪ್ರಮುಖರು, ವಿದ್ಯಾರ್ಥಿಗಳು, ಮಹಿಳೆಯರು ಸಾರ್ವಜನಿಕರು ಸೇರಿದಂತೆ ಇತರರು ಇದ್ದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಿಗೆ, ಎಸ್.ಎಸ್.ಎಲ್.ಸಿ, ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತದಿಂದ ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು, ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿ ಸದಸ್ಯರು, ದಲಿತ ಚಿಂತಕರು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಮಾಜದ ಹಿರಿಯರು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಸಚಿವ ಸಂತೋಷ್ ಲಾಡ್ ಅವರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ

ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135 ನೇ ಜಯಂತಿ ನಿಮಿತ್ತ ಧಾರವಾಡದ ಜುಬ್ಲಿ ವೃತ್ತದ ಬಳಿ ಇರುವ ಸಂವಿಧಾನ ಶಿಲ್ಪಿ, ಬಾಬಾಸಾಹೇಬ ಡಾ.ಬಿ.ಆರ್.ಅಂಬೇಡ್ಕರ್, ಜಗಜ್ಯೋತಿ ಬಸವೇಶ್ವರ ಅವರ ಪ್ರತಿಮೆಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್, ಜಿಲ್ಲಾಧಿಕಾರಿ ಸ್ನೇಹಲ್ ಆರ್, ಹಾಗೂ ಅಧಿಕಾರಿಗಳು, ಜನಪ್ರತಿನಿಧಿಗಳು ಮಾಲಾರ್ಪಣೆ ಮಾಡಿದರು.

# ಡಾ|| ಬಿ.ಆರ್. ಅಂಬೇಡ್ಕರರ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ವಿಶ್ವದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವವಾದ ಭಾರತದ ಸಂವಿಧಾನ ರಚಿಸಿದ ಮಹಾನ್ ಮಾನ ವತಾವಾದಿ ಡಾ. ಬಿ.ಆರ್. ಅಂಬೇಡ್ಕರರು ಎಂದು ಪ್ರೋ. ಮಹೇಶ ಚನ್ನಂಗಿ ಹೇಳಿದರು.

ಸ್ಥಳೀಯ ಕಲ್ಮಠ ಆವರಣ ಚಂದರಗಿ ಸಭಾಭವನದಲ್ಲಿ ತಾಪಂ, ಪಪಂ ಮತ್ತು ಎಂ.ಕೆಹುಬ್ಬಳ್ಳಿ ಪಪಂ, ಸಮಾಜ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ತಾಪಂ ಇಓ ನಿಂಗಪ್ಪ ಮಸಳಿ ಕಾರ್ಯಕ್ರಮ ಉದ್ಘಾಟಿಸಿ ಪ್ರಾಸ್ತಾವಿಕ ನುಡಿಯುನ್ನಾಡಿದರು. ತಹಶೀಲ್ದಾರ ಕಲ್ಲನಗೌಡ ಪಾಟೀಲ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಶಿಕ್ಷಕಿ ವಿ.ಎಮ್. ಅಳಗುಂದಿಯವರಿಂದ ಪ್ರಾರ್ಥನಾ ಗೀತೆ ಹಾಗೂ ಸಿಪಿಐ ಶಿವಾನಂದ ಗುಡಗನಟ್ಟಿ ಇವರಿಂದ ಅಂಬೇಡ್ಕರ ಕುರಿತು ಭಕ್ತಿಗೀತೆ ನೇರವೇರಿದವು.

ಇದಕ್ಕೂ ಪೂರ್ವ ಚನ್ನಮ್ಮನ ವರ್ತುಳದಲ್ಲಿ ಅಂಬೇಡ್ಕರ ಹಾಗೂ ಬಾಬು ಜಗಜೀವನ ರಾಮ ಅವರ ಭಾವ ಚಿತ್ರದ ಮೆರವಣಿಗೆ ಶಾಸಕ ಬಾಬಾ ಸಾಹೇಬ ಪಾಟೀಲ ಚಾಲನೆ ನೀಡಿದರು. ನಂತರ ಗುರುವಾರ ಪೇಟೆ ಅರಳೀಕಟ್ಟಿ ಮಾರ್ಗವಾಗಿ ಕಲ್ಮಠ ಅಂಗಳದ ವರೆಗೆ ಕಲಾ ವಾದ್ಯಮೇಳದೊಂದಿಗೆ ಮೆರವಣಿಗೆ ಅದ್ದೂರಿಯಿಂದ ಜರುಗಿತು. ಎಸ್‌ಎಸ್‌ಎಲ್‌ಸಿ–ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ ಹಾಗೂ ಅತಿಥಿಗಳನ್ನು ಸತ್ಕರಿಸಲಾಯಿತು.

ಸಭೆಯಲ್ಲಿ ಪಪಂ ಅಧ್ಯಕ್ಷರುಗಳಾದ ಜೈಸಿದ್ರಾಮ ಮಾರಿಹಾಳ, ಸುರೇಶ ಮುತ್ನಾಳ, ಮುಖ್ಯಾಧಿಕಾರಿಗಳಾದ ಮಲ್ಲಯ್ಯಾ ಹಿರೇಮಠ, ರವಿಶಂಕರ ಮಾಸ್ತಿಹೊಳಿಮಠ, ಬಿಇಓ ಚನ್ನಬಸಪ್ಪ ತುಬಾಕಿ, ಪಿಡಬ್ಲೂಡಿ ಎಇಇ ಸಂಜೀವ ಮಿರಜಕರ, ಎಸಿಡಿಪಿಓ ಶ್ರೀದೇವಿ ಕುಂತೋಜಿ, ಕ್ಯೂರೇಟರ್ ರಾಘವೇಂದ್ರ, ಪಿಎಸ್‌ಐ ಪ್ರವೀಣ ಗಂಗೋಳ, ಕಸಾಪ ಅಧ್ಯಕ್ಷ ಶ್ರೀಕಾಂತ ದಳವಾಯಿ, ಉಪನೊಂದಣಿ ಅಧಿಕಾರಿ ರಜನೀಶ ಪರಡ್ಡಿ, ಮುಖಂಡರುಗಳಾದ ಭೀಮಸಿ ದುರಗನ್ನವರ, ಶಿವಾನಂದ ಚಿನ್ನನವರ, ರಾಜು ಜಾಗಂಟಿ, ಮಡಿವಾಳಪ್ಪ ವಕ್ಕುಂದ, ಸುರೇಶ ಜಾಗಂಟಿ, ಬಸವರಾಜ ಕೆಳಗಡೆ, ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ, ರಮೇಶ ತುರಮಂದಿ, ಲಕ್ಷ್ಮೀ ಲಮಾಣಿ, ಪರಶುರಾಮ ಕನಬರ, ಸುವರ್ಣಾ ಯರಗಟ್ಟಿ, ಶ್ರೀಕಾಂತ ಶೀಗಿಹಳ್ಳಿ, ವಿದ್ಯಾ ದೊಡಮನಿ, ಎಂ.ಎಸ್. ಪಾಟೀಲ, ರೂಪಾ ಜ್ಯೋತಿ, ಅಂಗನವಾಡಿ ಆಶಾ, ದಲಿತ ಮುಖಂಡರು, ತಾಲೂಕ ಮಟ್ಟದ ಎಲ್ಲ ಅಧಿಕಾರಿಗಳು, ಪಪಂ, ಸಮಾಜ ಕಲ್ಯಾಣ ಇಲಾಖೆ, ಸಾರ್ವಜನಿಕರಿದ್ದರು. ಮಂಜುನಾಥ ತೊಟಗಿ ನಿರೂಪಿಸಿ ಸ್ವಾಗತಿಸಿದರು.

# ಉದ್ಘಾಟನಾ ಸಮಾರಂಭ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಗರದ ಹಳೇ ಹುಬ್ಬಳ್ಳಿ ಯ ಚಿಟ್ಟಾ ಕಾಂಪ್ಲೆಕ್ಸ್‌ಲ್ಲಿ ಫ್ಯೂಚರ್ ಫೌಂಡೇಶನ್ ಸಂಸ್ಥೆಯ ಉದ್ಘಾಟನಾ ಸಮಾರಂಭ ಇತ್ತೀಚೆಗೆ ಜರುಗಿತು.

ಹುಬ್ಬಳ್ಳಿ ಧಾರವಾಡ ಪೂರ್ವ ಮತ ಕ್ಷೇತ್ರದ ಶಾಸಕರಾದ ಪ್ರಸಾದ ಅಬ್ಬಯ್ಯ ಅವರು ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಹು.ಧಾ ಮಹಾನಗರ ಪಾಲಿಕೆ ಸದಸ್ಯರಾದ ರಾಜಣ್ಣ ಕೊರವಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಅಲ್ತಾಫಹುಸೇನ ಹಳ್ಳೂರ, ಅನಿಲಕುಮಾರ ಪಾಟೀಲ, ಸನಾ ಸಂಸ್ಥೆಯ ನಿರ್ದೇಶಕರಾದ ಅಶ್ರಫ್ ಅಲಿ, ಮಾಜಿ ಪಾಲಿಕೆ ಸದಸ್ಯರಾದ ಅಬ್ದುಲ್ ವಹಾಬ ಮುಲ್ಲಾ, ಸಮಾಜ ಸೇವಕರು ಯುವ ಮುಖಂಡರಾದ ಸುರೇಶ ಮಾನಶೆಟ್ಟರ, ಗಿರೀಶ ಮಾನಶೆಟ್ಟರ ಹಾಗೂ ಗಣ್ಯರು ಆಗಮಿಸಿದ್ದರು.

ಸಂಸ್ಥೆಯ ಅದ್ಯಕ್ಷರಾದ ಸಾದಿಕ್ ಖಾನ ಹಕಿಂ ಅವರು ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲಾ ಗಣ್ಯರಿಗೆ ಸನ್ಮಾನಿಸಿ ಮಾತನಾಡಿ, ನಮ್ಮ ಸಂಸ್ಥೆಯು ವತಿಯಿಂದ ಕಂಪ್ಯೂಟರ್, ಮೆಹಂದಿ,



ಹೊಲಿಗೆ, ಬ್ಯುಟಿಷಿಯನ್, ಇಂಗ್ಲಿಷ್, ಹೀಗೆ ವಿವಿಧ ಕೌಶಲ್ಯದ ತರಬೇತಿ ನೀಡಲಾಗುವುದು, ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಫ್ಯೂಚರ ಫೌಂಡೇಶನ್ ಪದಾಧಿಕಾರಿಗಳಾದ ನವೀನಕುಮಾರ ಮಡಿವಾಳರ, ಶಕೀಲ್ ಧಾರವಾಡ, ಶ್ರೀಕಾಂತ ತೇಲಗರ, ಮುನ್ನಾಭಾಯಿ ಗುಡಗೇರಿ, ಅಬ್ಬಾಸ್ ಪಾನಿಗಟ್ಟಿ, ಜಮೀರ ಬಿಜಾಪುರ, ಇಸಾಕ ಮುರಾದಖಾನ, ನಿಯಾಜ ಬೇಪಾರಿ, ಶಮ್ಸಿರ ಬಿಜಾಪುರ, ಅಯಾನ ಅತ್ತಾರ ಮತ್ತಿತರರು ಇದ್ದರು.

# ಡಾ.ಬಿ.ಆರ್.ಅಂಬೇಡ್ಕರ್ ಅವರ 135 ನೇ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ಗದಗ:** ಗದಗ ಪ್ರಧಾನ ಅಂಚೆ ಕಚೇರಿಯಲ್ಲಿ ಅಂಚೆ ಮನರಂಜನಾ ಕೂಟದ ಸಂಯುಕ್ತಾಶ್ರಯದಲ್ಲಿ ಸಂವಿ ಧಾನ ಶಿಲ್ಪಿ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರ 135 ನೇ ಜನ್ಮ ದಿನಾಚರಣೆ ಆಚರಿಸಲಾಯಿತು.



ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಎಲ್ಲರೂ ಸಾಮೂಹಿಕವಾಗಿ ಪುಷ್ಪಾರ್ಚನೆ ಸಲ್ಲಿಸಿದರು.

ಬಳಿಕ ಡಾ.ಅಂಬೇಡ್ಕರ್ ಜೀವನ ಸಾಧನೆ, ಸಮಾನತೆಯ ಹೋರಾಟ, ಅಸ್ಪೃಶ್ಯತೆ ನಿರ್ಮೂಲನೆ, ಸ್ತ್ರೀ ಸಮಾನತೆ ಕುರಿತ ಗೀತೆಗಳ ಗಾಯನ ಕಾರ್ಯಕ್ರಮವನ್ನು ಎಸ್.ವಿ.ಹಿರೇಮಠ, ಪೋತರಾಜ ಸಾಕಿ ಅವರು ಪ್ರಸ್ತುತಪಡಿಸಿದರು. ಅಂಚೆ ನಿರೀಕ್ಷಕ ನಾಗರಾಜ ಮಳ್ಳಿ, ಪ್ರಧಾನ ಅಂಚೆ ಪಾಲಕ ಡಿ.ಜಿ. ಮ್ಯಾಗೇರಿ, ವಿ.ಎಂ. ಅಂಗಡಿ, ಮಂಜು ನಾಥ ಕುರಿಯವರ, ಮಂಜುನಾಥ ಪಾಮೇನಹಳ್ಳಿ, ಮನೋಹರ ಕಡಿಯ ವರ, ವೆಂಕಟೇಶ ಆಕಳವಾಡಿ, ಶರಣ ಪ್ಪ ಬೇನಾಳ, ಸಿದ್ಧಲಿಂಗೇಶ ಯಂಡಿ ಗೇರಿ, ಉಮೇಶ ಸಂದಿಮನಿ, ಲಕ್ಷ್ಮೀ ಮಾದರ, ಶಿವಯ್ಯ ಮತ್ತಿತರರು ಪಾಲ್ಗೊಂಡಿದ್ದರು.



ನಗರದ ಹಳೇ– ಹುಬ್ಬಳ್ಳಿ ಮೇದಾರ ಓಣಿಯಲ್ಲಿ ಹುಬ್ಬಳ್ಳಿ ಮೇದಾ ಸಮಾಜದ ಅಭ್ಯುದಯ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತ್ಯೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಮಾಜದ ಪದಾಧಿಕಾರಿಗಳು, ಹಿರಿಯರು, ಯುವಕರು ಉಪಸ್ಥಿತರಿದ್ದರು.

# ಡಾ. ಅಂಬೇಡ್ಕರ್ ಅವರ 135ನೇ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ಗದಗ:** ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು, ಡಾ. ಅಂಬೇಡ್ಕರ್ ಅವರು ಭಾರತದ ಸಂವಿಧಾನದ ಮೂಲಕ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಮಾನವ ಹಕ್ಕುಗಳ ಮೌಲ್ಯಗಳನ್ನು ಸ್ಥಾಪಿಸಿದ ಮಹಾನ್ ದಾರ್ಶನಿಕರು ಎಂದು ಹೇಳಿದರು. ಸಮಾಜದ ಹಿಂದುಳಿದ ವರ್ಗಗಳ ಉನ್ನತಿಗಾಗಿ ಅವರು ಮಾಡಿದ ಹೋರಾಟವು ಇಂದಿಗೂ ಪ್ರಸ್ತುತವಾಗಿದ್ದು, "ಶಿಕ್ಷಣ ಸರ್ವರಿಗೂ – ಸಮ ಬಾಳು, ಸಮ ಪಾಲು" ಎಂಬ ಅವರ ಆಶಯವು ಸಮಾನತೆಯ ಸಮಾಜ ನಿರ್ಮಾಣಕ್ಕೆ ಮಾರ್ಗದರ್ಶಕವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಸಂವಿಧಾನಾತ್ಮಕ ಮೌಲ್ಯಗಳನ್ನು ಅಳವಡಿಸಿಕೊಂಡು ನ್ಯಾಯ, ಸಮಾನತೆ ಮತ್ತು ಬಾಂಧವ್ಯವನ್ನು ಜೀವನದಲ್ಲಿ ಅನುಸರಿಸುವುದು ಪ್ರತಿಯೊಬ್ಬರ ಕರ್ತವ್ಯವೆಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಧೀಕ್ಷಕರಾದ ಶಶಿಭೂಷಣ ದೇವೂರ ಅವರು, ಡಾ. ಅಂಬೇಡ್ಕರ್ ಅವರ ಜೀವನ ಹಾಗೂ ಸಾಧನೆಗಳು ಶ್ರಮ, ದೃಢನಿಶ್ಚಯ ಮತ್ತು ಶಿಕ್ಷಣದ ಮಹತ್ವವನ್ನು ಪ್ರತಿಪಾದಿಸುತ್ತವೆ ಎಂದು ತಿಳಿಸಿದರು. ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಪರಿಕಲ್ಪನೆಗಳನ್ನು ಸಮಾಜದಲ್ಲಿ ಅಳವಡಿಸುವುದು ಪ್ರತಿಯೊಬ್ಬ ನಾಗರಿಕನ ಹೊಣೆಗಾರಿಕೆಯಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜಕರಾದ ಪ್ರಕಾಶ್ ಮಾಚೇನಹಳ್ಳಿ, ಡಾ. ಅಂಬೇಡ್ಕರ್ ಅವರ ಚಿಂತನೆಗಳು ಯುವ ಪೀಳಿಗೆಗೆ ಸಾಮಾಜಿಕ ಜವಾಬ್ದಾರಿತ್ವ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳ ಅರಿವು ಮೂಡಿಸುತ್ತವೆ ಎಂದು ಹೇಳಿದರು. ಉಪನ್ಯಾಸಕರಾದ ಡಾ. ಸಂತೋಷಕುಮಾರ, ಚಂದ್ರಪ್ಪ ಬಾರಂಗಿ ಹಾಗೂ ಪ್ರವೀಣ್ ಅಂಕಲಕೋಟಿ ಅವರು ಡಾ. ಅಂಬೇಡ್ಕರ್ ಅವರ ಸಾಮಾಜಿಕ ಸುಧಾರಣಾ ಚಳುವಳಿ, ಶಿಕ್ಷಣದ ಮಹತ್ವ ಹಾಗೂ ಸಮಾನತೆಯ ಪರಿಕಲ್ಪನೆಗಳ ಕುರಿತು ತಮ್ಮ ವಿಚಾರಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ, ಮೃತ್ಯುಂಜಯ ಮೆಣಸಿನಕಾಯಿ, ವಿಶೇಷಾಧಿಕಾರಿಗಳಾದ ಶ್ರೀ ಉಮೇಶ್ ಬಾರಕೇರ, ಎಂ.ಬಿ. ಚನ್ನಪ್ಪಗೌಡರ, ಡಾ. ಗಿರೀಶ್ ದೀಕ್ಷಿತ್, ಡಾ. ಶ್ರೀಧರ ಹಾದಿಮನಿ ಅವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ ಸುರೇಶ್ ಲಮಾಣಿ ಸ್ವಾಗತ ಕೋರಿದರು. ವಿದ್ಯಾರ್ಥಿನಿಯಾದ ಕು. ಪೂರ್ಣಿಮಾ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಡಾ. ಅಂಬೇಡ್ಕರ್ ಅವರ ಆದರ್ಶಗಳಿಗೆ ಗೌರವ ನಮನ ಸಲ್ಲಿಸಿದರು.

# ಬಣವೆಗಳಿಗೆ ಬೆಂಕಿ

**ಬೆಳಗಾವಿ ವಾರ್ತೆ ನವಲಗುಂದ:** ಪಟ್ಟಣದ ಕಳ್ಳಿಮಠ ಓಣಿಯ ಪ್ರಗತಿಪರ ರೈತರಾದ ಮಲ್ಲಪ್ಪ ಹಳ್ಳದ ಅವರು ಜಾನುವಾರುಗಳಿಗೆ ಸಂಗ್ರಹಿಸಿಟ್ಟಿದ್ದ ಹೊಟ್ಟು ಹಾಗೂ ಮೇವಿನ ಬಣವಿಗಳಿಗೆ ಆಕಸ್ಮೀಕ ಬೆಂಕಿ ತಗುಲಿದ ಪರಿಣಾಮ ಲಕ್ಷಾಂತರ ರೂಗಳ ಹಾನಿ ಸಂಭವಿಸಿದ ಘಟನೆ ಮಂಗಳವಾರ ಮದ್ಯಾಹ್ನ ಜರುಗಿದೆ. ಬಣವಿಯಲ್ಲಿ ಹೊಗೆಯಾಡುತ್ತಿದ್ದು ದನ್ನು ಗಮನಿಸಿದ ಸ್ಥಳೀಯರು ಬೆಂಕಿ ನಂದಿಸಲು ಪ್ರಯತ್ನ ಪಟ್ಟರೂ ಸಾದ್ಯವಾಗದಿದ್ದುದರಿಂದ. ಪುರಸಭೆ ಸಿಬ್ಬಂದಿ ಹಾಗೂ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಲು ಸಹಕರಿಸಿದರು.



ಸುದ್ದಿ ತಿಳಿದ ಶಾಸಕ ಎನ್.ಎಚ್. ಕೋನರಡ್ಡಿ ಅಧಿಕಾರಿಗಳೊ ಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ. ಹಾನಿಗೊಳಗಾದ ರೈತರಿಗೆ ಸಾಂತ್ವನ ಹೇಳಿ ಸರಕಾರದಿಂದ ಸೂಕ್ತ ಪರಿಹಾರ ದೊರಕಿಸಿಕೊಡುವ ಭರವಸೆ ನೀಡಿದರು.

ತಹಶೀಲ್ದಾರ ಸುಧೀರ ಸಾಹುಕಾರ.ಪುರಸಭೆ ಮುಖ್ಯಾಧಿಕಾರಿ ಶರಣಪ್ಪ ಪೂಜಾರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಡಾ. ಅಂಬೇಡ್ಕರ್ ಬದುಕು ಮಾದರಿ: ಪಿಎಸ್‌ಐ ಜನಾರ್ಧನ ಭಟ್ರಳ್ಳಿ

**ಬೆಳಗಾವಿ ವಾರ್ತೆ ನವಲಗುಂದ:** ಡಾ. ಬಿ.ಆರ್. ಅಂಬೇಡ್ಕರ್ ಅವರ ಮಾದರಿ ಬದುಕು, ತತ್ವ, ಚಿಂತನೆಗಳು ಪ್ರತಿಯೊಬ್ಬರಿಗೂ ಮಾದರಿಯಾಗಿದೆ ಎಂದು ಪಿಎಸ್‌ಐ ಜನಾರ್ಧನ ಭಟ್ರಳ್ಳಿ ಅಭಿಪ್ರಾಯಪಟ್ಟರು.

ಅವರು ಸ್ಥಳೀಯ ಪೊಲೀಸಠಾಣೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಅಂಬೇಡ್ಕರ್ ಅವರು ಮಹಾ ಮಾನವತಾವಾದಿ ಅವರ ಹೋರಾಟದ ಬದುಕು ಸ್ಮರಣಿಯ ಎಂದರು.

ಪೊಲೀಸ್ ಹಾಗೂ ಗೃಹರಕ್ಷಕ ದಳ ಸಿಬ್ಬಂದಿಗಳು ಉಪಸ್ಥಿತರಿದ್ದರು.



# ಡಾ. ಅಂಬೇಡ್ಕರ್ ಜಯಂತಿ ಆಚರಣೆ




**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಯಳವತ್ತಿ ಗ್ರಾಮ ಪಂಚಾಯಿತಿಯಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತೋತ್ಸವವನ್ನು ಆಚರಿಸಲಾಯಿತು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪಿಡಿಓ ಸವಿತಾ ಹುನಗುಂದವರು ಪುಷ್ಪಾರ್ಚನೆ ಮಾಡಿ ಮಾತನಾಡಿ ಅವರು ಭಾರತಕ್ಕೆ ನೀಡಿದ ಸಂವಿಧಾನ ಒಂದು ಮಹಾನ್ ಗ್ರಂಥವಾಗಿದೆ ಸಂವಿಧಾನದಲ್ಲಿನ ಹಕ್ಕು ಮತ್ತು ಕರ್ತವ್ಯಗಳನ್ನು ಅರಿತುಕೊಂಡು ಎಲ್ಲರೂ ಸಂವಿಧಾನಕ್ಕೆ ಬದ್ಧರಾಗಿ ನಡೆಯಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುರೇಶ್ ಬಿರಣ್ಣವರ ಹಾಗೂ ಪಂಚಾಯತಿ ಸಿಬ್ಬಂದಿ ವರ್ಗದವರು ಇದ್ದರು.

# ದೇಶಕ್ಕೆ ತನ್ನದೇ ಆದ ಕೊಡುಗೆ ಕೊಟ್ಟ ವ್ಯಕ್ತಿಗೆ ಅಂಬೇಡ್ಕರರು



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ತಾಲೂಕಿನ ನಿಚ್ಚಣಕಿ ಗ್ರಾಮದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರರ ಹಾಗೂ ಬಾಬು ಜಗಜೀವನ ರಾಮ್ ಅವರ ಜಯಂತಿ ಅದ್ದೂರಿಯಿಂದ ಜರುಗಿತು.

ಅಂಬೇಡ್ಕರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮ ಅಧ್ಯಕ್ಷತೆ ಮಾಜಿ ಶಾಸಕ ಹಾಗೂ ಡಿಸಿಸಿ ಬ್ಯಾಂಕ್ ನಿರ್ದೇಶಕ ಮಹಾಂತೇಶ ದೊಡ್ಡಗೌಡರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿಜೆಪಿ ಮುಖಂಡೆ ಲಕ್ಷ್ಮೀ ಇನಾಮದಾರ ಆಗಮಿಸಿ ಮಾತನಾಡಿದರು.

ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ, ಸಂದೀಪ ದೇಶಪಾಡೆ, ಸಿದ್ದನಗೌಡ ಪಾಟೀಲ, ಶಿವಾನಂದ ಹನಮಸಾಗರ ಸೇರಿದಂತೆ ಹಲವರು ಮಾತನಾಡಿದರು. ಈ ವೇಳೆ ಗ್ರಾಪಂ ಮಾಜಿ ಸದಸ್ಯ ಮಲ್ಲೇಶ ಚುಳಕಿ, ರಾಜೇಂದ್ರ ಇನಾಮದಾರ, ಉಳವಪ್ಪ ಉಳ್ಳಾಗಡ್ಡಿ, ಬಸನಗೌಡ ಸಿದ್ರಾಮನಿ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಸವರಾಜ ಮಾತನವರ, ರುದ್ರಪ್ಪ ಲಿಂಗಮೇತ್ರಿ, ಫಕ್ಕೀರ ಜಾಗಂಟಿ, ಅಜ್ಜಪ್ಪ ನೇಗಿನಹಾಳ, ರಾಜಶೇಖರ ನಡವಿನಮನಿ, ಮಹಾದೇವ ಹತ್ತಿ, ಶಂಕರ ಸೇರಿದಂತೆ ಬಿಜೆಪಿ ಕಾರ್ಯಕರ್ತರು, ಸಮಾಜದ ಮುಖಂಡರು, ಸಾರ್ವಜನಿಕರಿದ್ದರು.

# ನಮ್ಮ ರಾಷ್ಟ್ರದ ಬೆಳವಣಿಗೆಯಲ್ಲಿ ಸಂವಿಧಾನ ಶಿಲ್ಪಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪಾತ್ರ ಗಣನೀಯ: ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ನಮ್ಮ ರಾಷ್ಟ್ರದ ಬೆಳವಣಿಗೆಯಲ್ಲಿ ಸಂವಿಧಾನ ಶಿಲ್ಪಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪಾತ್ರ ಗಣನೀಯ ಎಂದು ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಇಲ್ಲಿಯ ಎನ್‌ಎಸ್‌ಎಫ್‌ಫ್ ಕಾರ್ಯಾಲಯದಲ್ಲಿ ಭಾರತರತ್ನ ಡಾ. ಬಿ.ಆರ್.ಅಂಬೇಡ್ಕರ್ ಅವರ 131 ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಈ ರಾಷ್ಟ್ರದ ಧೀಮಂತ ವ್ಯಕ್ತಿಯಾಗಿದ್ದರು ಎಂದು ಅವರು ಬಣ್ಣಿಸಿದರು.

ಭಾರತವು ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಲು ಅವರ ಕೊಡುಗೆ ಅಪಾರವಾಗಿದೆ. ಸಂವಿಧಾನವನ್ನು ರಚಿಸಿ, ನಮ್ಮ ಮೂಲಭೂತ ಹಕ್ಕುಗಳನ್ನು ಪಡೆಯಲು ಭದ್ರಬುನಾದಿ ಹಾಕಿದ್ದಾರೆ. ಅಂಬೇಡ್ಕರ್ ಅವರ ಆದರ್ಶ, ತತ್ವಗಳು ಇಂದಿಗೂ ಪ್ರಸ್ತುತವಾಗಿವೆ. ದಲಿತ ಸಮುದಾಯದವರಿಗೆ ಅಷ್ಟೇ ಸಿಮೀತವಾಗದೇ ಎಲ್ಲ ವರ್ಗಗಳ ಪ್ರೀತಿಗೆ ಪಾತ್ರರಾಗಿದ್ದಾರೆ. ಭಾರತಕ್ಕೆ ಸಂವಿಧಾನದ ದೊಡ್ಡ ಕೊಡುಗೆ ನೀಡಿರುವ ಅಂಬೇಡ್ಕರ್ ಅವರನ್ನೇ ಆಗಿನ ಕಾಂಗ್ರೆಸ್ ಸರ್ಕಾರವು ಸೋಲಿಸಿತು. ಇದು ವಿಪರ್ಯಾಸದ ಸಂಗತಿ ಎಂದರು.

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿದರು.

ಅರಭಾವಿ ಮಂಡಲ ಬಿಜೆಪಿ ಅಧ್ಯಕ್ಷ ಮಹಾದೇವ ಶೆಕ್ಕಿ, ಪ್ರಭಾ ಶುಗರ್ಸ್ ಅಧ್ಯಕ್ಷ ಶಿದ್ದಲಿಂಗಪ್ಪ ಕಂಬಳಿ, ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರಮೋದ ನುಗ್ಗಾನಟ್ಟಿ, ಬಿಜೆಪಿ ಎಸ್ಸಿ ಮೋರ್ಚಾ ಅಧ್ಯಕ್ಷ ಸಂಜಯ ಹೊಸಮನಿ, ತಾ.ಪಂ.ಮಾಜಿ ಸದಸ್ಯರಾದ ನಾಗಪ್ಪ ಮಂಗಿ, ಸುಭಾಸ ಕಮತಿ, ವಿಠ್ಠಲ ಆಡಿನ, ಸಿದ್ದು ಕಂಕಣವಾಡಿ, ಬಿಜೆಪಿ ಪದಾಧಿಕಾರಿಗಳು, ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಾಲುವೆಗೆ ಮತ್ತು ಮೂಡಲಗಿ ಹಳ್ಳಕ್ಕೆ ನೀರು ಹರಿಸಬೇಕೆಂದು ಆಗ್ರಹಿಸಿ ಮನವಿ



**ಬೆಳಗಾವಿ ವಾರ್ತೆ ಮೂಡಲಗಿ :** ಪಟ್ಟಣದ ಭಗೀರಥ ವೃತ್ತದಿಂದ ಪೂರ್ವಕ್ಕೆ ಬರುವ ಎಡದಂಡೆ ಕಾಲುವೆಗೆ ಮತ್ತು ಮೂಡಲಗಿ ಪಟ್ಟಣದ ಮಧ್ಯ ಭಾಗದಲ್ಲಿನ ಹಳ್ಳಕ್ಕೆ ನೀರು ಹರಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವಾಸುದೇವ ಮೇಟಿ ಬಣದ ಜಿಲ್ಲಾಧ್ಯಕ್ಷ ಕಲ್ಮೇಶ್ ಗೋಕಾಕ ನೇತೃತ್ವದಲ್ಲಿ ತಹಸೀಲ್ದಾರ್ ಶ್ರೀಶೈಲ್ ಗುಡಮೆ ಅವರಿಗೆ ಮನವಿ ಸಲ್ಲಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಕಲ್ಮೇಶ ಗೋಕಾಕ ಮಾತನಾಡಿ, ಜನ ಜಾನುವಾರಗಳಿಗೆ ಕುಡಿಯುವ ನೀರಿಗಾಗಿ ಪಟ್ಟಣ ಭಗೀರಥ ವೃತ್ತದ ಬಳಿಯಿಂದ ಕಾಲುವೆಗೆ ಧರ್ಮಟ್ಟಿ, ಪಟಗುಂದಿ, ಕಮಲದಿನ್ನಿ ಗ್ರಾಮದವರೆಗೆ ಮತ್ತು ಮೂಡಲಗಿ ಹಳ್ಳಕ್ಕೆ ನೀರು ಹರಿಸುವ ಕಾರ್ಯವಾಗ ಬೇಕು ಮತ್ತು ತ್ವರಿತಗತಿಯಲ್ಲಿ ಸಂಭದಪಟ್ಟ ಅಧಿಕಾರಿಗಳಿಗೆ ಸೂಚಿಸಲು ಆಗ್ರಹಿಸಿದರು.

ಅಧಿಕಾರಿಗಳು ಈ ಕಾರ್ಯವನ್ನು ಬೇಗನೆ ಮಾಡದೆ ಹೊದರೆ ಈ ಬಾಗದ ರೈತರು ಮತ್ತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಭೀಮಶಿ ಕೋರಿಶೇಟ್ಟಿ, ಶಿವು ಗೋಕಾಕ್, ಅಶೋಕ್ ಕೂಳವಿ, ಸಂಜು ಹಂಜಿ, ಚೇತನ ಕುಲಗೋಡ, ಚೇತನ ನಿಶಾನಿಮಠ ಸೇರಿದಂತೆ ಅನೇಕ ರೈತರು ಮತ್ತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಸದಸ್ಯರು ಉಪಸ್ಥಿತರಿದ್ದರು.

# ಪ್ರತಿ ಮನೆಯಲ್ಲಿ, ಪ್ರತಿ ಮನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಚಿಂತನೆಗಳನ್ನು ಮನೆ ಮಾಡಬೇಕಾಗಿದೆ

**ಬೆಳಗಾವಿ ವಾರ್ತೆ ಗೋಕಾಕ:** ಪ್ರತಿ ಮನೆಯಲ್ಲಿ, ಪ್ರತಿ ಮನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಚಿಂತನೆಗಳನ್ನು ಮನೆ ಮಾಡಬೇಕಾಗಿದೆ ಎಂದು ತಾಪಂ ಅಧಿಕಾರಿ ಪರಶುರಾಮ ಗಸ್ತೆ ಹೇಳಿದರು.

ಮಂಗಳವಾರದಂದು ನಗರದ ಅಂಬೇಡ್ಕರ್ ಭವನದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಗೋಕಾಕ ಇವುಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಮಹಾಮಾನವತಾವಾದಿ ಡಾ.ಬಿ.ಆರ್.ಅಂಬೇಡ್ಕರ್ ರವರ 135ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ವಿಶ್ವ ಮಾನವರಾಗಿ ರಾರಾಜಿಸುತ್ತಿದ್ದಾರೆ. ಅವರ ತತ್ವ ಸಿದ್ದಾಂತಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುಂದೆ ಸಾಗಬೇಕು. ಅವರು ಯಾವುದೇ ಒಂದು ಸಮಾಜಕ್ಕೆ, ಪಂಥಕ್ಕೆ ಸೇರಿದವರಲ್ಲ ಅವರು ಇಡೀ ವಿಶ್ವದ ಮಾನವ ಕುಲಕ್ಕೆ ಸೇರಿದವರಾಗಿದ್ದಾರೆ. ಎಲ್ಲಾ ಭಾರತೀಯರು ಡಾ.ಅಂಬೇಡ್ಕರ್ ಅವರನ್ನು ಹುಟ್ಟಿನಿಂದ ಬಲ್ಲವರಾಗಿದ್ದೇವೆ ಆದರೆ ಅವರ ತತ್ವಗಳನ್ನು ಅಳವಡಿಸಿಕೊಳ್ಳುದರಲ್ಲಿ ಹಿಂದೆ ಉಳಿದಿದ್ದೇವೆ. ಅವರು ಬದುಕಿದ ದಾರಿಯಲ್ಲಿ ನಾವೆಲ್ಲರೂ ಬಾಳಿ ಬದುಕಬೇಕಾಗಿದೆ. ಭಾರತೀಯರ ಮಾತೃ ಹೃದಯರಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನವನ್ನು ನಾವು ಇಂದು ಪಾಲಿಸುತ್ತಿದ್ದೇವೆ.ಸಮಾಜದ ಕಟ್ಟಕಡೆಯ ವ್ಯಕ್ತಿಯು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂಬ ಉದ್ದೇಶ ಅಂಬೇಡ್ಕರ್ ಅವರು ಹೊಂದಿದ್ದರು ಆ ಆಸೆಯನ್ನು ನಾವು ಈಡೇರಿಸಬೇಕಾಗಿದೆ. ಮುಂದಿನ ಪೀಳಿಗೆಗೆ ಅಂಬೇಡ್ಕರ್ ಅವರ ವಿಚಾರಗಳನ್ನು ನಾವು ನೀಡಬೇಕಾಗಿದೆ. ನಮ್ಮಿಂದ ನಾವು ಹಿಂದುಳಿದಿದ್ದೇವೇ ಹೋರೆತು ಬೇರೆಯವರಿಂದ ಅಲ್ಲ ಎಂಬ



ಸತ್ಯವನ್ನು ಅರಿತುಕೊಂಡು ನಾವು ದುರ್ಬಲರಾಗದೆ ಸಬಲರಾಗಿ ದೇಶವನ್ನು ಕಟ್ಟಬೇಕಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಹಶೀಲ್ದಾರ ಡಾ.ಮೋಹನ್ ಭಸ್ಮೆ ವಹಿಸಿದ್ದರು.

ಉಪನ್ಯಾಸಕರಾಗಿ ಆಗಮಿಸಿದ ನ್ಯಾಯವಾದಿ ಬಾಹುಸಾಹೇಬ ಕಾಂಬಳೆ ಅವರು ಡಾ.ಬಿ.ಆರ್.ಅಂಬೇಡ್ಕರ್ ಕುರಿತು ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಅಧಿಕಾರಿ ಎ.ಬಿ.ಮಲಬನ್ನವರ, ಸಿಪಿಐ ಸರೇಶಬಾಬು, ಪೌರಾಯುಕ್ತ ರವಿ ರಂಗಸುಭೆ, ಡಾ.ಎಂ.ಎಸ್.ಕೊಪ್ಪದ, ಪ್ರಮಿಳಾ ಬೇವಿನಗಿಡದ, ಶಿವಾನಂದ ಹಿರೇಮಠ, ಎಂ.ಎಲ್.ಜನ್ಮಟ್ಟಿ, ಎಂ.ಎಂ.ನಧಾಫ, ಡಿ.ಎಸ್.ಕೂಡವಕ್ಕಲಿಗ, ಮುಖಂಡರುಗಳಾದ ವೀರಭದ್ರ ಮ್ಯೆಲನ್ನವರ, ಗೋವಿಂದ ಕಳ್ಳಿಮನಿ, ಓಂಕಾರಪ್ಪ ಬಂಡಿವಡ್ಡರ,ಸುಂದರವ್ವ ಕಟ್ಟಿಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ,ಶ್ರೀ ಲಕ್ಷ್ಮಣರಾವ್ ಜಾರಕಿಹೊಳಿ ಪದವಿ ಮಹಾವಿದ್ಯಾಲಯ ಇವುಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರದಂದು ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಐ.ಎಸ್.ಪವಾರ್, ಸಂತೋಷ ನರಗುಂದ, ಪ್ರವಿಣ ಕಂಡ್ರಟ್ಟಿ, ಶ್ರೀಮತಿ ಸಿ.ಆರ್.ಕಮ್ಮಾರ ಉಪಸ್ಥಿತರಿದ್ದರು.

# ಸಂಗೀತ ಒಂದು ಸಾಧನೆ, ಆರಾಧನೆ




**ಬೆಳಗಾವಿ ವಾರ್ತೆ ಬೆಳಗಾವಿ:** ಪರಿಶ್ರಮದಿಂದ ಮಾತ್ರ ಸಾಧನೆ ಸಾಧ್ಯ.ಹಾಡಿನ ಮೋಡಿಗೆ ಒಳಗಾಗದಿರುವವರು ಭೂಮಿಯ ಮೇಲೆ ಯಾರೂ ಇಲ್ಲ, ಸಂಗೀತ ಒಂದು ಸಾಧನೆ ಮತ್ತು ಸಂಗೀತ ಒಂದು ಆರಾಧನೆ,ಕಷ್ಟದಿಂದಲೇ ಸಾಧನೆಯ ಶಿಖರವೇರಿದ ಆಶಾ ಭೋಂಸ್ಲೆ ಅಮರಕಲಾವಿದೆ. ಎಂದು ಶಿಕ್ಷಕ ಹಾಗೂ ವಾಗ್ಮಿ ರಾಮಚಂದ್ರ ಕಾಕಡೆ ಹೇಳಿದರು. ಅವರು ಗೋಕಾವಿ ಗೆಳೆಯರ ಬಳಗ ಮಧುರ ಸಂಗೀತ ಬಳಗ ಗುಂಪು ಕಲಾವಿದರು, ಶ್ರೀ ಸರ್ವೇಶ್ವರ ಜಾನಪದ ಕಲಾ ಸಂಸ್ಥೆ, ಬಿಂದು ಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ಸಿದ್ದಾರ್ಥ ಲಲಿತ ಕಲಾ ಮಹಾವಿದ್ಯಾಲಯದಲ್ಲಿ ಹೆಸರಾಂತ ಚಲನಚಿತ್ರ ಗಾಯಕಿ ಆಶಾ ಭೋಂಸ್ಲೆ ಶೋಕ ಆಚರಣೆ ಸಭೆಯಲ್ಲಿ ಮಾತ'ನಾಡಿದರು. ಮೂಡಲಗಿ ಚೈತನ್ಯ ಆಶ್ರಮದ ವೈ ಬಿ ಪಾಟೀಲ, ಶಿಕ್ಷಕ ಹಾಗೂ ಚಿಂತಕ ಶಂಕರ ಕ್ಯಾಸ್ತಿ, ಹಿರಿಯ ಬೈಲಾಟ ಕಲಾವಿದ ಹಾಗೂ ಸಾಹಿತಿ ಈಶ್ವರ್ ಚಂದ್ರ ಬೆಟಗೇ ರಿ, ಶಿಕ್ಷಕ ಹಾಗೂ ಕವಿ ಈಶ್ವರ ಮಮದಾಪುರ,ನೇಸರಗಿಯ ಸಾಹಿತಿ ಸಿ.ವಾಯ್ ಮೆಣಸಿನಕಾಯಿ, ಬಸವಜೋತಿ ಐಟಿಐ ಕಾಲೇಜ್ ಚೇರ್ಮನ್ ಅಶೋಕ್ ಲಗಮಪ್ಪ ಗೋಳ ಇದ್ದರು.

# ಶಿಕ್ಷಣವೇ ಸಮಾಜದ ಶಕ್ತಿ; 1.50 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಡಿಜಿಟಲ್ ಗ್ರಂಥಾಲಯ ನಿರ್ಮಾಣ ಡಾ. ಬಿ ಆರ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಲಕ್ಷ್ಮಣ ಸವದಿ ಘೋಷಣೆ



**ಬೆಳಗಾವಿ ವಾರ್ತೆ ಅಥಣಿ:** "ಬಾಬಾಸಾಹೇಬ್ ಅಂಬೇಡ್ಕರ್ ಅವರು ಜೀವನದುದ್ದಕ್ಕೂ ತುಳಿತಕ್ಕೊಳಗಾದವರ ಸಮಾನತೆಗಾಗಿ ಹೋರಾಡಿದವರು. ಅವರ ವಿಚಾರಧಾರೆ ಗಳು ಕೇವಲ ಒಂದು ಸಮಾಜಕ್ಕೆ ಸೀಮಿತವಾಗದೆ, ಎಲ್ಲರೂ ಒಗ್ಗೂಡಿ ಆಚರಿಸಿದಾಗ ಮಾತ್ರ ಜಯಂತಿ ಗಳಿಗೆ ನಿಜವಾದ ಅರ್ಥ ಸಿಗುತ್ತದೆ," ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು ಅವರು

ತಾಲೂಕು ಆಡಳಿತ, ತಾಲೂಕು ಪಂಚಾಯತ ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ತೋಟಗಾರಿಕಾ ಇಲಾಖೆ ಆವರಣದಲ್ಲಿ ಆಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ

ಪಟ್ಟಣದ ಉದ್ಯಾನವನ ಪಕ್ಕದಲ್ಲಿ 1.50 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಡಿಜಿಟಲ್ ಗ್ರಂಥಾಲಯ ನಿರ್ಮಿಸಲಾಗುವುದು ಇದರ ಟೆಂಡರ್ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, 15 ದಿನಗಳಲ್ಲಿ ಭೂಮಿ ಪೂಜೆ ನೆರವೇಸಲಿದ್ದೆವೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಬಡ ವಿದ್ಯಾರ್ಥಿಗಳಿಗೆ ಇದು ಅನುಕೂಲವಾಗಲಿದೆ

ತಾಲೂಕಿನಲ್ಲಿ ಈಗಾಗಲೇ ಪಶು ವೈದ್ಯಕೀಯ ಕಾಲೇಜು ಆರಂಭವಾಗಿದೆ. 508 ಕೋಟಿ ರೂ. ವೆಚ್ಚದ ಕೃಷಿ ಕಾಲೇಜು ನಿರ್ಮಾಣಕ್ಕೆ ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭೂಮಿ ಪೂಜೆ ನೆರವೇರಿಸಲಿದ್ದಾರೆ ಅಲ್ಲದೆ, ಹೊಸದಾಗಿ 9 ಪ್ರೌಢಶಾಲೆ ಹಾಗೂ 3 ಕೆಪಿಎಸ್ ಶಾಲೆಗಳನ್ನು ಮಂಜೂರು ಮಾಡಸಲಾಗಿದೆ.

ಕಾರ್ಮಿಕರ ಮಕ್ಕಳಿಗಾಗಿ 35 ಕೋಟಿ ರೂ. ವೆಚ್ಚದ ಸುಸಜ್ಜಿತ ವಸತಿ ಶಾಲೆ ನಿರ್ಮಾಣಕ್ಕೆ ಏಪ್ರಿಲ್ 26 ರಂದು ಚಾಲನೆ ನೀಡಲಾಗುವುದು.

ಅಥಣಿಗೆ ಕೇಂದ್ರೀಯ ವಿದ್ಯಾಲಯ ತರಲು ಪಟ್ಟ ಶ್ರಮವನ್ನು ವಿವರಿಸಿದ ಶಾಸಕರು, "ಹಿಂದಿನ ಕೆಲವು ಅಧಿಕಾರಿಗಳ ತಪ್ಪು ವರದಿಯಿಂದಾಗಿ ಈ ಯೋಜನೆ ವಿಳಂಬವಾಗಿತ್ತು. ದೆಹಲಿಗೆ ಹತ್ತು ಬಾರಿ ಭೇಟಿ ನೀಡಿ, ಸತತ ಪ್ರಯತ್ನದ ಫಲವಾಗಿ ಇಂದು ದಾಖಲಾತಿ ಆರಂಭವಾಗಿದೆ," ಎಂದು ತಿಳಿಸಿದರು.

12ನೇ ಶತಮಾನದಲ್ಲಿ ಬಸವಣ್ಣನವರು ನಡೆಸಿದ ಸಾಮಾಜಿಕ ಕ್ರಾಂತಿ ಹಾಗೂ ಅನುಭವ ಮಂಟಪದ ವಿಚಾರಧಾರೆಗಳೇ ಅಂಬೇಡ್ಕರ್ ಅವರಿಗೆ ಸಂವಿಧಾನ ರಚನೆಯಲ್ಲಿ ಪ್ರೇರಣೆಯಾಗಿರಬಹುದು. ಇಂದು ಪ್ರತಿಯೊಬ್ಬರಿಗೂ ಮಾತನಾಡುವ ಹಕ್ಕು ಸಿಕ್ಕಿರುವುದು ಸಂವಿಧಾನದ ಶಕ್ತಿಯಾಗಿದೆ ಎಂದು ಸವದಿ ಅವರು ವಿವರಿಸಿದರು

ಇನ್ನೂ ಸುಬಾಶ ನಾಟಿಕರ ಉಪನ್ಯಾಸ ಹೇಳಿದರು ಪುರಸಭೆ ಮುಖ್ಯಾಧಿಕಾರಿ ಅಶೋಕ ಗುಡಿಮನಿ ಹಾಗೂ ಸಮಾಜ ಕಲ್ಯಾಣ ಅಧಿಕಾರಿ ಪರಶುರಾಮ ಪತ್ತಾರ, ಪ್ರಾಸ್ತಾವಿಕವಾಗಿ ಮಾತನಾಡಿದರು,

ಈ ವೇಳೆ ಪಂಚ ಗ್ಯಾರಂಟಿ ಯೋಜನೆ ಅಧ್ಯಕ್ಷ ಸಿದ್ಧಾರ್ಥ್ ಸಿಂಗೆ, ಪುರಸಭೆ ಅಧ್ಯಕ್ಷೆ ಶಿವಲೀಲಾ ಬೂಟಾಳಿ, ಉಪಾಧ್ಯಕ್ಷ ಭುವನೇಶ್ವರಿ ಯಕ್ಕಂಚಿ, ತಹಸೀಲ್ದಾರ್ ಸಿದ್ರಾಯ ಭೋಸಗಿ, ಡಿವೈಎಸ್ಪಿ ಪ್ರಶಾಂತ ಮುನ್ನೊಳಿ, ಸೇರಿದಂತೆ ಹಲವು ಜನಪ್ರತಿನಿ ಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಶಿಕ್ಷಕ ಸಂಗಮೇಶ ಹಚಡದ ನಿರೂಪಿಸಿಸಿದರು ವಂದನಾರ್ಪನೆ ಲಕ್ಷ್ಮಣ ಜಯಗೊನಿ ಮಾಡಿದರು.

# ಮುನ್ಯಾಳ ಗ್ರಾ. ಪಂ ದಿಂದ ಅಂಬೇಡ್ಕರ್ ಭವನಕ್ಕೆ ಕುರ್ಚಿ ದೇಣಿಗೆ



**ಬೆಳಗಾವಿ ವಾರ್ತೆ ಮೂಡಲಗಿ:** ತಾಲ್ಲೂಕಿನ ಮುನ್ಯಾಳ ಗ್ರಾಮ ಪಂಚಾಯತಿಯಿಂದ ಗ್ರಾಮದ ಅಂಬೇಡ್ಕರ್ ಭವನಕ್ಕೆ ಕುರ್ಚಿಗಳನ್ನು ವಿತರಿಸಲಾಯಿತು.

ಮಂಗಳವಾರದಂದು ಮುನ್ಯಾಳ ಗ್ರಾ. ಪಂ ಹತ್ತಿರ ಸಂವಿಧಾನ ಶಿಲ್ಪಿ ಡಾ ಬಿ ಆರ್ ಅಂಬೇಡ್ಕರ್ ಅವರ ಜಯಂತಿಯನ್ನು ಆಚರಿಸಿ ಗ್ರಾ. ಪಂ ಪಿಡಿಓ ಶ್ರೀಶೈಲ್ ತಡಸನ್ನವರ ಮಾತನಾಡಿ, ಗ್ರಾಮ ಪಂಚಾಯಿತಿಯಿಂದ ದೇಣಿಗೆ ನೀಡಿದ ಕುರ್ಚಿಗಳನ್ನು ಸಭೆ ಹಾಗೂ ಸಮಾರಂಭಗಳಿಗೆ ಸದುಪಯೋಗ ಮಾಡಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಆನಂದ್ ರಾವ್ ನಾಯ್ಕು, ಶಿವಾನಂದ ಬಿಳ್ಳೂರು, ಮಲ್ಲಪ್ಪ ಮದಿಹಳ್ಳಿ, ಗ್ರಾಮದ ಡಿಎಸ್‌ಎಸ್ ಸಂಘದ ಮುಖ್ಯಸ್ಥ ಸಂಜು ಮಂಟೂರ್, ಡಿಎಸ್‌ಎಸ್ ನ ಇತರೆ ಪದಾಧಿಕಾರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ನಾಗನೂರ ಅರ್ಬನ್ ಸಹಕಾರಿ ಸಂಘಕ್ಕೆ 2.75 ಕೋಟಿ ರೂ ಲಾಭ–ತಡಸನವರ

**ಬೆಳಗಾವಿ ವಾರ್ತೆ ಮೂಡಲಗಿ:** ನಾಗನೂರ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ 2025–26 ಸಾಲಿನ ಮಾರ್ಚ ಅಂತ್ಯಕ್ಕೆ 19 ಶಾಖೆಗಳನ್ನು ಹೊಂದಿ 2.75 ಕೋಟಿ ರೂ ಲಾಭವನ್ನು ಹೊಂದಿ ಪ್ರಗತಿಯ ದಾರಿಯಲ್ಲಿ ಸಾಗಿದೆ ಎಂದು ಸಹಕಾರಿ ಸಂಘದ ಅಧ್ಯಕ್ಷ ಬಸವರಾಜ ತಡಸನವರ ಹೇಳಿದರು.

ಅವರು ತಾಲೂಕಿನ ನಾಗನೂರ ಪಟ್ಟಣದ ನಾಗನೂರ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿಯ ಪ್ರಗತಿ ಸಹಕರಿಸಿದ ಪ್ರಧಾನ ಕಛೇರಿಯಲ್ಲಿ ಆಡಳಿತ ಮಂಡಳಿ ಹಾಗೂ ಎಲ್ಲ ಶಾಖೆಗಳ ಸಲಹಾ ಸಮಿತಿ ಸದಸ್ಯರು ಮತ್ತು ಎಲ್ಲ ಸಿಬ್ಬಂದಿ ವರ್ಗ, ಪಿಗ್ಮಿ ಸಂಗ್ರಹಕಾರರು, ಸದಸ್ಯರಿಗೆ ಏರ್ಪಡಿಸಿದ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಸಂಘದ ವಹಿವಾಟ ವಿವರಿಸಿ ಮಾತನಾಡಿ, ಸಹಕಾರಿ ಸಂಘವು ಕಳೆದ ಮಾರ್ಚ ಅಂತ್ಯಕ್ಕೆ 1.7 ಕೋಟಿ ರೂ ಶೇರು ಬಂಡವಾಳ ಹೊಂದಿ, 206.75 ಕೋಟಿ ರೂ ಠೇವು ಸಂಗ್ರಹಿಸಿ, ವಿವಿಧ ತೆರನಾದ 168.40 ಕೋಟಿ ರೂ




ಸಾಲಗಳು ವಿತರಿಸಿ, 43.96 ಕೋಟಿ ರೂ ಶಾಸನ ಬದ್ಧ ಹೂಡಿಕೆ ಮಾಡಿ, 16.47 ಕೋಟಿ ರೂ ನಿಧಿಗಳನ್ನು ಹೊಂದುವದರೊಂದಿಗೆ ಒಟ್ಟು 227.35 ಕೋಟಿ ರೂ ದುಡಿಯುವ ಬಂಡವಾಳ ಹೊಂದಿದೆ ಎಂದರು.

ಸಹಕಾರಿ ಸಂಘವು ಈಗಾಗಲೇ 19 ಶಾಖೆಗಳನ್ನು ಹೊಂದಿ ಎಲ್ಲ ಶಾಖೆಗಳು ಪ್ರಗತಿಯಲ್ಲಿದ್ದು ಮುಂಬರುವ ದಿನಗಳಲ್ಲಿ ಇನ್ನೂ ಬೇರೆ ಬೇರೆ ಜಿಲ್ಲೆಗಳಲ್ಲಿ ಶಾಖೆಗಳ ಆರಂಭಿಸುವ ಮತ್ತು ಶಾಖೆಗಳ ಸ್ವಂತ ಕಟ್ಟಡ ಹೊಂದಲು ನಿವೇಶ ಖರೀದಿಸುವ ಗುರಿ ಹೊಂದಲಾಗಿದೆ ಎಂದರು.

ಪ್ರಧಾನ ವ್ಯವಸ್ಥಾಪಕ ಪ್ರಕಾಶ ಅಂಗಡಿ ಮಾತನಾಡಿ, ಸಹಕಾರಿ ಸಂಘದ ಗ್ರಾಹಕರು ಸಕಾಲಕ್ಕೆ ವ್ಯವಹಾರ ನಡೆಸಿದರಿಂದ ಪ್ರಗತಿ ಪತಥದತ್ತ ಸಾಗುತ್ತಿವೆ ಎಂದರು

ಸಮಾರಂಭದಲ್ಲಿ ಸಹಕಾರಿಯ ನಿರ್ದೇಶಕರಾದ ವೆಂಕಪ್ಪ ಪೂಜೇರಿ, ಶ್ರೇಯಾಂಶ ಮೇಳವಂಕಿ, ಕೆಂಪಣ್ಣಾ ಕರಿಹೊಳಿ, ಶಿವಾನಂದ ದಡ್ಡಿ, ಕೆಂಪಣ್ಣಾ ನಿಡಸೋಸಿ, ದುಂಡಪ್ಪ ಬೆಳಕೂಡ, ಮಲ್ಲಪ್ಪ ಬಂಡಿ, ರಾಮನಗೌಡ ತಡಸನವರ, ಹಣಕಾಸು ಅಭಿವೃದ್ಧಿ ಅಧಿಕಾರಿಗಳಾದ ಭೀಮಪ್ಪ ಬಂಡಿವಡ್ಡರ, ಶಿವಾನಂದ ಕರೋಳಿ ಮತ್ತಿತರರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001